ಸಂಪಾದಕರು: ದರ್ಶನ್.ಟಿ
Editor : DARSHAN.T

# ನಮ್ಮ ಜನ
# NAMMA JANA

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 80 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 04–10–2023 ಬುಧವಾರ | ಪುಟ: 4 | ಬೆಲೆ : ರೂ.2–00
Volume - 01 Issue - 80 | Title- Code: KARKAN 28269 | Chitradurga | Date: 04-10-2023 Wednesday | Page: 4 | Price: Rs. 2-00

ಒಳಪುಟದ ಸುದ್ದಿಗಳು
ವಾಣಿಜ್ಯೋದ್ಯಮಿಗಳ ಸಾಮಾಜಿಕ ಕಳಕಳಿ ಮೆಚ್ಚುವಂತಹದ್ದು: ಶಾಸಕ ರಘುಮೂರ್ತಿ 2
ಕುಡಿತ ಮುಕ್ತ ಸಮಾಜ ನಿರ್ಮಾಣಕ್ಕೆ ಎಲ್ಲರೂ ಕೈಜೋಡಿಸಬೇಕು: ಕೆ.ಸತೀಶ್‌ನಾಯ್ಕ 3
ಎಲ್ಲರ ಸಹಕಾರದಿಂದ ಮಾತ್ರ ಸ್ವಚ್ಛತೆಯ ಪರಿಕಲ್ಪನೆ ಯಶಸ್ಸು 4

ಸುದ್ದಿ, ಜಾಹಿರಾತಿಗೆ 9686622252

## ಫಾಸ್ಟ್ ನ್ಯೂಸ್

### ಅ.6ರಂದು ಉದ್ಯಮಶೀಲತಾ ತರಬೇತಿ ಶಿಬಿರ

» ಚಿತ್ರದುರ್ಗ

ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಇಲಾಖೆ ಪ್ರಾಯೋಜಕತ್ವದಲ್ಲಿ ಸಿಡಾಕ್ (ಕರ್ನಾಟಕ ಉದ್ಯಮಶೀಲತಾಭಿವೃದ್ಧಿ ಕೇಂದ್ರ, ಧಾರವಾಡ) ಸಂಸ್ಥೆಯಿಂದ ಸ್ವಯಂ ಉದ್ಯೋಗ ಕೈಗೊಳ್ಳಲು ಇಚ್ಛಿಸುವ ಚಿತ್ರದುರ್ಗ ಜಿಲ್ಲೆಯ ಆಸಕ್ತ ಪರಿಶಿಷ್ಟ ಜಾತಿ, ಪಂಗಡದ ಅಭ್ಯರ್ಥಿಗಳಿಗೆ ಒಂದು ದಿನದ "ಉದ್ಯಮಶೀಲತಾ ತಿಳುವಳಿಕೆ ತರಬೇತಿ ಶಿಬಿರ"ವನ್ನು ಅಕ್ಟೋಬರ್ 6ರಂದು ಮೊಳಕಾಲ್ಮುರು ತಾಲ್ಲೂಕಿನ ಬಿ.ಜಿ.ಕೆರೆ ಶ್ರೀ ಮಾರುತಿ ಶಿಕ್ಷಣ ಮತ್ತು ಗ್ರಾಮೀಣ ಅಭಿವೃದ್ಧಿ ಸಂಸ್ಥೆಯಲ್ಲಿ ಸಂಘಟಿಸಲು ಯೋಜಿಸಲಾಗಿದೆ. ಕಾರ್ಯಕ್ರಮದಲ್ಲಿ ಸ್ವಂತ ಉದ್ಯಮ ಸ್ಥಾಪಿಸ ಬಯಸುವ ಆಸಕ್ತರಿಗೆ ಪ್ರೇರೇಪಣೆ, ಸ್ವಂತ ಉದ್ಯಮ ಸ್ಥಾಪನೆಗಾಗಿ ಸರ್ಕಾರ ಹಾಗೂ ಹಣಕಾಸು ಸಂಸ್ಥೆಗಳಿಂದ ದೊರೆಯುವ ನೆರವು, ಪ್ರೋತ್ಸಾಹ, ಮುಂದೆಕೈಗೊಳ್ಳಲಾಗುವ ಉದ್ಯಮಶೀಲತಾಭಿವೃದ್ಧಿ ತರಬೇತಿ ಇತ್ಯಾದಿ ವಿಷಯಗಳ ಕುರಿತು ಮಾಹಿತಿಯನ್ನು ನೀಡಲಾಗುವುದು. ಆಸಕ್ತರು ಈ ಕಾರ್ಯಕ್ರಮದಲ್ಲಿ ಭಾಗವಹಿಸಿ ಪ್ರಯೋಜನ ಪಡೆಯಲು ಕೋರಲಾಗಿದೆ. ಭಾಗವಹಿಸುವವರು ಕನಿಷ್ಠ 18 ವರ್ಷಗಳ ವಯಸ್ಸಿನವರಾಗಿರಬೇಕು ಹಾಗೂ ಓದಲು, ಬರೆಯಲು ಬರುತ್ತಿರಬೇಕು. ಹೆಚ್ಚಿನ ಮಾಹಿತಿಗಾಗಿ "ಜಂಟಿ ನಿರ್ದೇಶಕರು, ಸಿಡಾಕ್ ಕಛೇರಿ, ಜಿಲ್ಲಾ ಕೈಗಾರಿಕಾ ಕೇಂದ್ರ, ಜೋಗಿಮಟ್ಟಿ ರಸ್ತೆ, ಚಿತ್ರದುರ್ಗ" ಇವರನ್ನು ಕಛೇರಿ ವೇಳೆಯಲ್ಲಿ ಹಾಗೂ ಚಿತ್ರದುರ್ಗ ಸಿಡಾಕ್ ತರಬೇತುದಾರ ಪಿ.ವಿಜಯ ಕುಮಾರ ಅವರ ಮೊಬೈಲ್ ಸಂಖ್ಯೆ 7760270058 ಗೆ ಕಛೇರಿ ವೇಳೆಯಲ್ಲಿ ಸಂಪರ್ಕಿಸಬೇಕಾಗಿ ಕೋರಲಾಗಿದೆ.

ಅರ್ಜಿ ಸಲ್ಲಿಸಲು ಇಚ್ಛಿಸುವ ಅಭ್ಯರ್ಥಿಗಳು 2 ಪಾಸ್‌ಪೋರ್ಟ್ ಅಳತೆಯ ಫೋಟೋ ಹಾಗೂ ಆಧಾರ್ ಕಾರ್ಡ್‌ನ ಪ್ರತಿಯೊಂದಿಗೆ ಸಂಪರ್ಕಿಸುವಂತೆ ಪ್ರಕಟಣೆ ತಿಳಿಸಿದೆ.

### ಇಂದು ಶಾಸಕ ವೀರೇಂದ್ರ ಅವರಿಂದ ಜನತಾ ದರ್ಶನ

» ಚಿತ್ರದುರ್ಗ

ಚಿತ್ರದುರ್ಗ ಶಾಸಕ ಕೆ.ಸಿ.ವಿರೇಂದ್ರ ಪಪ್ಪಿ ಅವರ ಅಧ್ಯಕ್ಷತೆಯಲ್ಲಿ ಹಾಗೂ ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ ನೇತೃತ್ವದಲ್ಲಿ ಇದೇ ಅಕ್ಟೋಬರ್ 4ರಂದು ಬೆಳಿಗ್ಗೆ 10ಕ್ಕೆ ಚಿತ್ರದುರ್ಗ ನಗರದ ತರಾಸು ರಂಗಮಂದಿರದಲ್ಲಿ "ಜನತಾ ದರ್ಶನ" ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಚಿತ್ರದುರ್ಗ ತಾಲ್ಲೂಕಿಗೆ ಸಂಬಂಧಿಸಿದಂತೆ ಜನಪ್ರತಿನಿದಿಗಳು ಹಾಗೂ ಎಲ್ಲಾ ಇಲಾಖೆಯ ಅಧಿಕಾರಿ ವರ್ಗದವರು ಹಾಜರಿರುತ್ತಾರೆ. ತಾಲ್ಲೂಕಿನ ಎಲ್ಲಾ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಜನತಾ ದರ್ಶನದಲ್ಲಿ ತಮ್ಮ ಅಹವಾಲುಗಳನ್ನು ಸಲ್ಲಿಸಿ ಕಾರ್ಯಕ್ರಮದ ಸದುಪಯೋಗ ಪಡೆದುಕೊಳ್ಳಬೇಕು ಎಂದು ಚಿತ್ರದುರ್ಗ ತಾಲ್ಲೂಕು ತಹಶೀಲ್ದಾರ್ ಡಾ.ನಾಗವೇಣಿ ಕೋರಿದ್ದಾರೆ.

### ಗಾಂಧಿ ಪ್ರತಿಮೆ ನಿರ್ಮಾಣಕ್ಕೆ ಆಗ್ರಹ

» ಚಿತ್ರದುರ್ಗ

ದೇಶದ ಸ್ವಾತಂತ್ರ್ಯಕ್ಕಾಗಿ ಹೋರಾಡಿ ಪ್ರಾಣ ತ್ಯಾಗ ಮಾಡಿದ ರಾಷ್ಟ್ರಪಿತ ಮಹಾತ್ಮಗಾಂಧಿಜಿಯವರ 154 ಜಯಂತಿಯನ್ನು ಆಚರಿಸುತ್ತಿರುವ ಈಗಲಾಗದರೂ ಗಾಂಧಿವೃತ್ತದಲ್ಲಿ ಗಾಂಧಿಜಿ ಪ್ರತಿಮೆ ನಿರ್ಮಾಣ ಮಾಡುವಂತೆ ಕರ್ನಾಟಕ ಕೊಳಗೇರಿ ನಿವಾಸಿಗಳ



ಸಂಯುಕ್ತ ಸಂಘಟನೆ ಜಿಲ್ಲಾ ಸಮಿತಿ ಅಧ್ಯಕ್ಷ ಗಣೇಶ್ ಜಿಲ್ಲಾಧಿಕಾರಿ ಕಚೇರಿ ಎದುರು ಮಂಗಳವಾರ ಏಕಾಂಗಿಯಾಗಿ ಧರಣಿ ನಡೆಸಿ ಜಿಲ್ಲಾಡಳಿತಕ್ಕೆ ಮನವಿ ಸಲ್ಲಿಸಿದರು.

ಐತಿಹಾಸಿಕ ಪ್ರಸಿದ್ಧಿ ಪಡೆದಿರುವ ಚಿತ್ರದುರ್ಗದಲ್ಲಿ ಎಲ್ಲಿಯೂ ಗಾಂಧಿ ಪ್ರತಿಮೆಯಿಲ್ಲ. ಇಂದಿನ ಯುವ ಪೀಳಿಗೆಗೆ ಮಹಾತ್ಮಗಾಂಧಿ ಯಾರೆಂಬುದನ್ನು ತೋರಿಸಬೇಕಾಗಿರುವುದರಿಂದ ಮುಖ್ಯವೃತ್ತದಲ್ಲಿ ಗಾಂಧಿ ಪ್ರತಿಮೆ ನಿರ್ಮಿಸುವುದು ಒಳ್ಳೆಯದು ಎಂದು ಗಣೇಶ್ ಜಿಲ್ಲಾಡಳಿತಕ್ಕೆ ವಿನಂತಿಸಿದರು.

### ನಗರೋತ್ಥಾನ ಯೋಜನೆ ಹಂತ–4ರ ಜಿಲ್ಲಾ ಮಟ್ಟದ ಸಭೆಯಲ್ಲಿ ತೀರ್ಮಾನ

# ನಗರವಾರು ಟೆಂಡರ್‌ಗೆ ಸಮ್ಮತಿ

» ಚಿತ್ರದುರ್ಗ



ಕರ್ನಾಟಕ ಕುಡಿಯುವ ನೀರು ಸರಬರಾಜು ಹಾಗೂ ಒಳಚರಂಡಿ ಮಂಡಳಿ ವತಿಯಿಂದ ಹಿರಿಯೂರು, ಚಳ್ಳಕೆರೆ, ಮೊಳಕಾಲ್ಮೂರು ಹಾಗೂ ನಾಯಕನಹಟ್ಟಿನಲ್ಲಿ ಅಮೃತ–02 ಯೋಜನೆಯಡಿ ಕುಡಿಯುವ ನೀರಿನ ಪೈಪ್‌ಲೈನ್ ಅಳವಡಿಕೆ ಕಾಮಗಾರಿಗಳಿಗೆ, ನಗರವಾರು ಪ್ರತ್ಯೇಕವಾಗಿ ಟೆಂಡರ್ ಕರೆಯುವಂತೆ ಅಧಿಕಾರಿಗಳಿಗೆ ಯೋಜನೆ ಮತ್ತು ಸಾಂಖ್ಯಿಕ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಸೂಚನೆ ನೀಡಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಮಂಗಳವಾರ ಅಮೃತ ನಗರೋತ್ಥಾನ (ಮುನಿಸಿಪಾಲಿಟಿ) ಯೋಜನೆ ಹಂತ–4 ರ ಕುರಿತು ಜರುಗಿದ ಜಿಲ್ಲಾ ಮಟ್ಟದ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಈಗಾಗಲೇ ಸರ್ಕಾರದಿಂದ ಹಿರಿಯೂರು ನಗರಕ್ಕೆ ರೂ.30 ಕೋಟಿ, ಚಳ್ಳಕೆರೆ ನಗರಕ್ಕೆ ರೂ.28 ಕೋಟಿ, ಮೊಳಕಾಲ್ಮೂರು ಪಟ್ಟಣಕ್ಕೆ ರೂ.18, ನಾಯಕನಹಟ್ಟಿ ಪಟ್ಟಣಕ್ಕೆ 14 ಕೋಟಿ ಅನುದಾನ ಬಿಡುಗಡೆಯಾಗಿ, ಕರ್ನಾಟಕ ಕುಡಿಯುವ ನೀರು ಸರಬರಾಜು ಹಾಗೂ ಒಳಚರಂಡಿ ಮಂಡಳಿ ವತಿಯಿಂದ ಅನುಮೋದನೆ ಸಹ ನೀಡಲಾಗಿದೆ. ಆದಷ್ಟು ಬೇಗ ಟೆಂಡರ್ ಕರೆದು ಯೋಜನೆ ಅನುಷ್ಠಾನಗೊಳಿಸಬೇಕು. ಈ ಎಲ್ಲಾ ಯೋಜನೆಗಳನ್ನು ಒಟ್ಟು ಮಾಡಿ ಟೆಂಡರ್ ಕರೆಯಲು ಹೊದರೆ ರೂ.50 ಕೋಟಿಗೂ ಹೆಚ್ಚಿನ ಮೊತ್ತದ ಕಾಮಾಗರಿಯಾಗುವುದರಿಂದ ಸರ್ಕಾರ ಉನ್ನತ ಮಟ್ಟದ ಸಭೆಯ ಅನುಮೋದನೆ ಪಡೆಯಬೇಕಾಗುತ್ತದೆ. ಇದರಿಂದಾಗಿ ಕಾಮಗಾರಿ ಅನುಷ್ಠಾನವಾಗುವಲ್ಲಿ ಅನಗತ್ಯ ವಿಳಂಬವಾಗುತ್ತದೆ. ಹೊಳಲ್ಕೆರೆ ಹಾಗೂ ಹೊಸದುರ್ಗ ಪುರಸಭೆ ಸಂಬಂಧಿಸಿದ ಸಿದ್ದಪಡಿಸಿದ ವಿಸ್ತೃತ ಯೋಜನಾ ವರದಿಯನ್ನು ಮಂಡಳಿಗೆ ಕಳುಹಿಸಿ ಶೀಘ್ರವೇ ಅನುಮೋದನೆ ಪಡೆಯಬೇಕು ಎಂದರು. ಈ ವಿಚಾರವಾಗಿ ಮಂಡಳಿಯ ವ್ಯವಸ್ಥಾಪಕ ನಿರ್ದೇಶಕರಿಗೆ ಸಚಿವ ಡಿ.ಸುಧಾಕರ್ ಸಭೆಯ ಮಧ್ಯದಲ್ಲಿಯೇ ಕರೆ ಮಾಡಿ ಮಾತನಾಡಿದರು.

ವಿಕಚೇತನರ ಶೌಚಾಲಯ ನಿರ್ಮಾಣಕ್ಕೆ ಅನುಮೋದನೆ: ಶೇ.5 ರ ಯೋಜನೆಯಡಿ ಹಿರಿಯೂರು ನಗರದ 7 ಸರ್ಕಾರಿ ಶಾಲೆಗಳಲ್ಲಿ ವಿಕಚೇತನರಿಗಾಗಿ ವಿಶೇಷ ಶೌಚಾಲಯಗಳನ್ನು ನಿರ್ಮಿಸಲು ಸಭೆಯಲ್ಲಿ ಅನುಮೋದನೆ ನೀಡಲಾಯಿತು. ಇದೇ ಯೋಜನೆಯಡಿ 63.75 ಲಕ್ಷ ಅನುದಾನದಲ್ಲಿ ನಗರ ವ್ಯಾಪ್ತಿಯ ವಿಕಲಚೇತನರಿಗೆ ತ್ರಿಚಕ್ರ ವಾಹನ ನೀಡುವ ಯೋಜನೆಗೆ ನೀಡಿದ ಅನುಮತಿಯನ್ನು ಹಿಂಪಡೆಯಲಾಯಿತು. ಇದರ ಬದಲು ಜಿಲ್ಲಾ ಖನಿಜ ಪ್ರತಿಷ್ಠಾನ ಯೋಜನೆಯಡಿ ಈಗಾಗಲೇ ಹಂಚಿಕೆಯಾಗಿರುವಂತೆ ವಿಕಲಚೇತನರಿಗೆ ತ್ರಿಚಕ್ರ ವಾಹನ ನೀಡಲು ತೀರ್ಮಾನಿಸಲಾಯಿತು.

ಮೊಳಕಾಲ್ಮೂರು ಶಾಸಕ ಎನ್.ವೈ. ಗೋಪಾಲಕೃಷ್ಣ ಮಾತನಾಡಿ, ಪರಿಶಿಷ್ಟ ಜಾತಿ ಹಾಗೂ ಪಂಗಡದ ವರ್ಗಕ್ಕಾಗಿ ಮೀಸಲಿಟ್ಟ ಶೇ.24.10 ರ ಯೋಜನೆಯಡಿ ಕೈಗೊಂಡ ಎಲ್ಲಾ ಕಾಮಗಾರಿಗಳನ್ನು ಕಡ್ಡಾಯವಾಗಿ ಅನುಷ್ಠಾನಗೊಳಸಬೇಕು. ಬ್ಯಾಂಕ್‌ಗಳಲ್ಲಿ ಈ ಯೋಜನೆಯ ಹಣವನ್ನು ಠೇವಣಿ ಇಟ್ಟು ಬೇರೆ ಕಾರ್ಯಗಳಿಗೆ ಬಳಸುವುದು ಕಂಡುಬರುತ್ತದೆ. ಇಂತಹ ಘಟನೆಗಳು ನಡೆಯದಂತೆ ಅಧಿಕಾರಿಗಳು ಎಚ್ಚರವಹಿಸಬೇಕು. ಅಧಿಕಾರಿಗಳು ಸತ್ಯ ದೂರವಾದ ಯೋಜನೆಗಳನ್ನು ಕೈಗೆತ್ತಿಕೊಳ್ಳಬಾರದು. ಯಾವುದೇ ಅವ್ಯವಹಾರಗಳು ಜರುಗದಂತೆ ನೋಡಿಕೊಳ್ಳಬೇಕು ಎಂದರು.

ಕಳೆದ ಸರ್ಕಾರದ ಅವಧಿಯಲ್ಲಿ ವಿಶೇಷ ಪ್ರೋತ್ಸಾಹವಾಗಿ ನೀಡಲಾದ ರೂ.1 ಕೋಟಿ ಅನುದಾನಕ್ಕೆ ಕ್ರಿಯಾ ಯೋಜನೆ ತಯಾರಿಸಲಾಗಿದೆ. ಯೋಜನೆ ಅನುಷ್ಠಾನವಾಗದ ಕಾರಣ ಸರ್ಕಾರ ಈ ಅನುದಾನವನ್ನು ಹಿಂಪಡೆದುಕೊಂಡಿದೆ. ಜಿಲ್ಲಾಧಿಕಾರಿಗಳು ಈ ಕುರಿತು ಸರ್ಕಾರಕ್ಕೆ ಪತ್ರ ಬರೆದು ಅನುದಾನವನ್ನು ಮರಳಿ ತರಲು ಪ್ರಯತ್ನಿಸಬೇಕು. ಈ ಕಾರ್ಯಕ್ಕೆ ಜಿಲ್ಲಾ ಉಸ್ತುವಾರಿ ಸಚಿವರು ಹಾಗೂ ಎಲ್ಲಾ ಶಾಸಕರು ಸರ್ಕಾರ ಮಟ್ಟದಲ್ಲಿ ದನಿಗೂಡಿಸಬೇಕು ಎಂದರು.

ಕರ್ನಾಟಕ ಕುಡಿಯುವ ನೀರು ಸರಬರಾಜು ಹಾಗೂ ಒಳಚರಂಡಿ ಮಂಡಳಿಯಿಂದ ನಾಯಕಹಟ್ಟಿ ಪಟ್ಟಣದಲ್ಲಿ ಕುಡಿಯುವ ನೀರಿನ ಪೈಪ್‌ಲೈನ್ ಅಳವಡಿಕೆ ಕಾಮಗಾರಿ ಕೈಗೆತ್ತಿಕೊಳ್ಳುವುದರಿಂದ, ಪಟ್ಟಣದ ಪರಿಶಿಷ್ಟ ಜಾತಿಯ ಜನರು ಹೆಚ್ಚಿನ ಸಂಖ್ಯೆ ವಾಸಿಸುವ ವಾರ್ಡಗಳಲ್ಲಿ, ತುಂಗಭದ್ರ ಹಿನ್ನೀರು ಯೋಜನೆಯ ಮೂಲಕ ಕುಡಿಯುವ ನೀರು ಸರಬರಾಜು ಮಾಡಲು ನೀರು ಸರಬರಾಜು ವಿತರಣಾ ಜಾಲಕಲ್ಪಿಸಿಹೆಚ್.ಡಿ.ಪಿ.ಇಕೊಳವೆಮಾರ್ಗ ಅಳವಡಿಸಲು ಕರೆಯಲಾದ ಟೆಂಡರ್‌ನ್ನು ರದ್ದು ಪಡಿಸಿ, ಕಾರ್ಯಾದೇಶವನ್ನು ಹಿಂಪಡೆದು, ಇದಕ್ಕಾಗಿ ಮೀಸಲಿಟ್ಟ ರೂ. 34.99 ಲಕ್ಷವನ್ನು ಇತರೆ ಅಗತ್ಯ ಯೋಜನೆಗಳಿಗೆ ಬಳಸಿಕೊಳ್ಳುವಂತೆ ಸೂಚನೆ ನೀಡಿದರು.

ನಾಯಕನಹಟ್ಟಿ ಕೃಷಿ ಉತ್ಪನ್ನ ಮಾರುಕಟ್ಟೆಯಲ್ಲಿ ರೂ.10 ಕೋಟಿ ವೆಚ್ಚದಲ್ಲಿ ವಾಣಿಜ್ಯಮಳಿಗೆಗಳನ್ನುನಿರ್ಮಿಸಲಾಗುತ್ತಿದೆ. ಆದ್ದರಿಂದ ನಗರೋತ್ಥಾನ ಯೋಜನೆಯಡಿ ಮಳಿಗೆ ನಿರ್ಮಿಸಲು ಕೈಗೆತ್ತಿಕೊಂಡ ಯೋಜನೆಯನ್ನು ರದ್ದು ಪಡಿಸಿ, ಹಾಗೇಯೇ ಪಟ್ಟಣ ಪಂಚಾಯತಿ ಮೊದಲನೆ ಮಹಡಿ ಕಟ್ಟಡ ನಿರ್ಮಾಣ ಸೇರಿದಂತೆ ಪ್ರಾರಂಭವಾಗದ ಕಾಮಗಾರಿಗಳನ್ನು ಸ್ಥಗಿತಗೊಳಿಸಿ, ನಾಯಕನಹಟ್ಟಿಗೆ ಸಂಬಂಧಿಸಿದಂತೆ ಆಡಳಿತಾಧಿಕಾರಿಗಳಾದ ತಹಶೀಲ್ದಾರ್ ನೇತೃತ್ವದಲ್ಲಿ ಮೊತ್ತೊಮ್ಮೆ ಯೋಜನೆಗಳಿಗೆ ಕ್ರಿಯಾ ಯೋಜನೆ ತಯಾರಿಸಿ ಅನುಮೋದನೆ ಪಡೆದುಕೊಳ್ಳಬೇಕು ಎಂದರು.

ಶಾಸಕ ಬಿ.ಜಿ.ಗೋವಿಂದಪ್ಪ ಮಾತನಾಡಿ, ಹೊಸದುರ್ಗ ಪಟ್ಟಣದಲ್ಲಿ ಒಳಚರಂಡಿ ಜಾಲ ಅಳವಡಿಸಲು 2007 ಹಾಗೂ 2017 ರಲ್ಲಿ ಒಟ್ಟು ರೂ.24.88 ಕೋಟಿ ಅನುದಾನ ಬಿಡುಗಡೆ ಮಾಡಲಾಗಿದೆ. ಪಟ್ಟಣದಲ್ಲಿ ಒಳಚರಂಡಿ (ಯುಜಿಡಿ) ಜಾಲವನ್ನು ಅಭಿವೃದ್ಧಿ ಪಡಿಸಲಾಗಿದೆ. ಆದರೂ ಬಹುತೇಕ ಕಡೆ, ಚರಂಡಿ ನೀರು ರಸ್ತೆ ಹಾಗೂ ಬಡಾವಣೆಗಳಲ್ಲಿ ನಿಂತು, ದುರ್ನಾತ ಬೀರುತ್ತಿದ್ದು, ನಾಗರಿಕರಿಗೆ ತೊಂದರೆಯಾಗುತ್ತಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು. ಪಟ್ಟಣದ ಕೆಲವೆಡೆ ಜನರು ಅಕ್ರಮವಾಗಿ ಮನೆಯ ತ್ಯಾಜ್ಯ ನೀರು ಸಂಪರ್ಕವನ್ನು ಯುಜಿಡಿ ಸಂಪರ್ಕ ಜಾಲಕ್ಕೆ ಸೇರಿಸಿರುವುದರಿಂದ, ಅಲ್ಲಲ್ಲಿ ನೀರು ರಸ್ತೆಯ ಮೇಲೆ ಹರಿಯುತ್ತಿದೆ. ಇಂತಹ ಅಕ್ರಮ ಸಂಪರ್ಕವನ್ನು ಗುರುತಿಸಿ, ಸರಿಪಡಿಸುವ ಕಾರ್ಯ ಮಾಡಲಾಗುವುದು ಎಂದು ಪುರಸಭೆ ಮುಖ್ಯಾಧಿಕಾರಿ ಸಭೆಯಲ್ಲಿ ತಿಳಿಸಿದರು.

ಚಳ್ಳಕೆರೆ ಶಾಸಕ ಟಿ.ರಘುಮೂರ್ತಿ ಮಾತನಾಡಿ, ಚಳ್ಳಕೆರೆ ನಗರದಲ್ಲಿ ಸದ್ಯ ಪ್ರಗತಿಯಲ್ಲಿ ಇರುವ ಕಾಮಗಾರಿಗಳನ್ನು ಕಾಲಮಿತಿಯಲ್ಲಿ ಪೂರ್ಣಗೊಳಿಸಬೇಕು. ಅನಗತ್ಯ ಕಾಮಗಾರಿಗಳಿಗೆ ಅನುದಾನ ವಿನಯೋಗಿಸದೆ ಜನರಿಗೆ ಉಪಯೋಗವಾಗುವ ಕಾಮಗಾರಿಗಳನ್ನು ಕೈಗೊಳ್ಳಬೇಕು. ನೂತನವಾಗಿ ನಿರ್ಮಿಸಲಾಗಿರುವ ತಾಲ್ಲೂಕು ಪಂಚಾಯತಿ ಮೊದಲ ಮಹಡಿಯಲ್ಲಿ ವಿಕಲಚೇತರನ ಕಚೇರಿಗೆ ಜಾಗ ಮೀಸಲಿಡಬೇಕು. ವಿಕಲಚೇತನರ ಅನುಕೂಲಕ್ಕಾಗಿ ಕಟ್ಟದಲ್ಲಿ ಲಿಫ್ಟ್ ವ್ಯವಸ್ಥೆಯನ್ನು ನಗರೋತ್ಥಾನದ ಅನುದಾನದಲ್ಲಿ ಅಳವಡಿಸುವಂತೆ ಸೂಚನೆ ನೀಡಿದರು.

ಹೊಳಲ್ಕೆರೆ ಶಾಸಕ ಡಾ. ಎಂ.ಚಂದ್ರಪ್ಪ ಮಾತನಾಡಿ, ನಗರೋತ್ಥಾನ ಯೋಜನೆಯಡಿ ವೈಯಕ್ತಿಕ ಫಲಾನುಭವಿಗಳಿಗೆ ನೀಡುವ ಅನುದಾನವನ್ನು ಪೌರ ಕಾರ್ಮಿಕ ಮನೆಗಳ ನಿರ್ಮಾಣದ ವಂತಿಕೆಗೆ ಬಳಸಿಕೊಳ್ಳುವಂತೆ ಸಲಹೆ ನೀಡಿದರು.

ಪುಟ 2

## ನಿಮ್ಮ ಬೇಡಿಕೆಗಳ ಪಟ್ಟಿ ಸಲ್ಲಿಸಿ: ಮಾಜಿ ಸಂಸದ ಚಂದ್ರಪ್ಪ

» ಚಿತ್ರದುರ್ಗ

ಕೆರೆ ಅಭಿವೃದ್ಧಿ ಪ್ರಾಧಿಕಾರವನ್ನು ಬಲಪಡಿಸಬೇಕಾಗಿರುವುದರಿಂದ ಸಣ್ಣ ನೀರಾವರಿ ಸಚಿವರ ಜೊತೆ ಮತ್ತೊಂದು ಸಭೆ ನಡೆಸಿ ಎಲ್ಲೆಲ್ಲಿ ನ್ಯೂನ್ಯತೆಯಿದೆ ಎನ್ನುವುದನ್ನು ಸರಿಪಡಿಸುವ ಕೆಲಸ ಮಾಡೋಣ ಎಂದು ಮಾಜಿ ಸಂಸದ ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿ ಕಾರ್ಯಾಧ್ಯಕ್ಷ ಬಿ.ಎನ್.ಚಂದ್ರಪ್ಪ ಕೆರೆ ಬಳಕೆದಾರರ ಸಂಘಗಳ ಒಕ್ಕೂಟಕ್ಕೆ ಭರವಸೆ ನೀಡಿದರು.

ಸೀಬಾರ ಸಮೀಪವಿರುವ ಎಸ್.ಎನ್.ಸ್ಮಾರಕದ ಬಳಿ ಇತ್ತೀಚೆಗೆ ನಡೆದ ಜಿಲ್ಲಾ ಕೆರೆ ಬಳಕೆದಾರರ ಸಂಘಗಳ ಒಕ್ಕೂಟ ಕೆರೆ ಸಂರಕ್ಷಣೆ ಮತ್ತು ಕೆರೆ ಅಭಿವೃದ್ಧಿ ಪ್ರಾಧಿಕಾರ ವ್ಯಾಪ್ತಿಯಲ್ಲಿ ಬರುವ ಕರ್ನಾಟಕ ಸಮುದಾಯ ಆಧಾರಿತ ಕೆರೆ ನಿರ್ವಹಣೆ ಯೋಜನೆಯ 2022–23 ನೇ ಸಾಲಿನ ವಾರ್ಷಿಕ ಮಹಾಸಭೆಯಲ್ಲಿ ಭಾಗವಹಿಸಿ ಮಾತನಾಡಿದರು.ಟಿ.ಬಿ.ಜಯಚಂದ್ರರವರು ನೀರಾವರಿ ಸಚಿವರಾಗಿದ್ದಾಗ 30 ಕೋಟಿ ರೂ.ಗಳನ್ನು ಬಿಡುಗಡೆಗೊಳಿಸಿದ್ದರು. ಪ್ರೊ.ರಾಧಕೃಷ್ಣರವರು ಜನಪರ, ರೈತ ಪರ ಕಾಳಜಿಯುಳ್ಳವರು. ನಂತರ ಬಿಜೆಪಿ. ಜೆಡಿಎಸ್. ಮೈತ್ರಿ ಸರ್ಕಾರ ರಾಜ್ಯದಲ್ಲಿ ಅಧಿಕಾರಕ್ಕೆ ಬಂದಾಗ ಕುಂಠಿತವಾಯಿತು.

ಪುಟ 4

## ಹೊಳಲ್ಕೆರೆ ಪುರಸಭೆಯಿಂದ ಮೇರಿ ಮಾಟಿ ಮೇರ ದೇಶ್ ಅಭಿಯಾನಕ್ಕೆ ಚಾಲನೆ

**ಹೊಳಲ್ಕೆರೆ :** ಕೇಂದ್ರ, ಪೌರಾಡಳಿತ ನಿರ್ದೇಶನಾಲಯ, ಜಿಲ್ಲಾಡಳಿತದ ಆದೇಶದಂತೆ "ಮೇರಿ ಮಾಟಿ ಮೇರ ದೇಶ್" ಅಭಿಯಾನವನ್ನು ಪಟ್ಟಣದ ವ್ಯಾಪ್ತಿಯಲ್ಲಿ ಹಮ್ಮಿಕೊಂಡು ಮನೆ ಮನೆಗೆ ಹೋಗಿ ಅಕ್ಕಿ ಅಥವಾ ಮಣ್ಣನ್ನು ಪಡೆದು ಕೊಳ್ಳಲಾಗಿತ್ತು. ತದನಂತರ ನವದೆಹಲಿಗೆ ಕಳುಹಿಸಿಕೊಡುವಂತೆ ಸೂಚಿಸಿರುವ ರೀತ್ಯಾ ವಾರ್ಡ್‌ವಾರು ಸ್ಥಳಗಳನ್ನು ನಿಗದಿಪಡಿಸಿಕೊಂಡು ವಾರ್ಡ್ ಸದಸ್ಯರ ಅಧ್ಯಕ್ಷತೆಯಲ್ಲಿ ಮನೆ ಮನೆಗೆ ಹೋಗಿ ಅಕ್ಕಿ, ಮಣ್ಣನ್ನು ಪಡೆಯಲಾಗುತ್ತಿದೆ ಎಂದು ಮುಖ್ಯಾಧಿಕಾರಿ ಎ.ವಾಸಿಂ ತಿಳಿಸಿದ್ದಾರೆ.

ಪುಟ 4

## ಪ್ರಮುಖ ಸುದ್ದಿ

### ಕ್ರಿಯಾಯೋಜನೆಯಡಿ ಪ್ರಗತಿಯಲ್ಲಿರುವ ಕಾಮಗಾರಿಗಳನ್ನು ತ್ವರಿತವಾಗಿ ಪೂರ್ಣಗೊಳಿಸಿ– ಡಿ. ಸುಧಾಕರ್

# ಡಿಎಂಎಫ್ ನಿಧಿಯಡಿ 115 ಕೋಟಿ ರೂ. ಸಂಗ್ರಹ

» ಚಿತ್ರದುರ್ಗ



ಜಿಲ್ಲಾ ಖನಿಜ ನಿಧಿಯಡಿ (ಡಿಎಂಎಫ್) ಪ್ರಸ್ತುತ 115 ಕೋಟಿ ರೂ. ಗಳು ಸಂಗ್ರಹವಾಗಿದ್ದು, 2023 ರವರೆಗಿನ ಅನುಮೋದನೆಗೊಂಡಿರುವ ಕ್ರಿಯಾ ಯೋಜನೆಯಡಿ ಈಗಾಗಲೆ ಪ್ರಗತಿಯಲ್ಲಿರುವ ಬಾಕಿ ಕಾಮಗಾರಿಗಳನ್ನು ತ್ವರಿತವಾಗಿ ಪೂರ್ಣಗೊಳಿಸಿ, ಇನ್ನೂ ಪ್ರಾರಂಭಗೊಳ್ಳದಿರುವ ಕಾಮಗಾರಿಗಳ ವಿವರ ಸಲ್ಲಿಸುವಂತೆ ಯೋಜನೆ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಡಿ. ಸುಧಾಕರ್ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಮಂಗಳವಾರ ಏರ್ಪಡಿಸಲಾದ ಜಿಲ್ಲಾ ಖನಿಜ ಪ್ರತಿಷ್ಠಾನ ಟ್ರಸ್ಟ್‌ನ ಆಡಳಿತ ಮಂಡಳಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಗಣಿ ಮತ್ತು ಭೂವಿಜ್ಞಾನ ಇಲಾಖೆ ಉಪನಿರ್ದೇಶಕ ಮಹೇಶ್ ಅವರು ಮಾಹಿತಿ ನೀಡಿ, ಜಿಲ್ಲಾ ಖನಿಜ ನಿಧಿಯಡಿ ಪ್ರಸ್ತುತ 115 ಕೋಟಿ ರೂ. ಸಂಗ್ರಹವಿದೆ. ಆದರೆ ಗಣಿಬಾಧಿತ ಪ್ರದೇಶಗಳಲ್ಲಿ ಕೈಗೊಳ್ಳಬೇಕಾಗಿರುವ ವಿವಿಧ ಇಲಾಖೆಗೆ ಸಂಬಂಧಿಸಿದ 2023 ರವರೆಗಿನ ಅನುಮೋದಿತ ಕ್ರಿಯಾ ಯೋಜನೆಯಡಿ ನಾನಾ ಕಾಮಗಾರಿಗಳು ಇನ್ನೂ ಪ್ರಗತಿಯಲ್ಲಿವೆ. ಈಗ ಸಂಗ್ರಹವಿರುವ 115 ಕೋಟಿಯಲ್ಲಿ ಹಿಂದಿನ ಮೂರು ವರ್ಷಗಳ ಅವಧಿಯ ಕ್ರಿಯಾ ಯೋಜನೆಯಂತೆ ಹಾಗೂ ಮುಂದುವರೆದಿರುವ ಕಾಮಗಾರಿಗಳನ್ನು ಪೂರ್ಣಗೊಳಿಸುವ ಸಲುವಾಗಿಯೇ 100 ಕೋಟಿ ರೂ. ಅಗತ್ಯವಿದೆ ಎಂದರು. ಇದಕ್ಕೆ ಪ್ರತಿಕ್ರಿಯಿಸಿದ ಸಚಿವರು, ಇದುವರೆಗೂ ಪ್ರಾರಂಭವಾಗದೇ ಇರುವ ಕಾಮಗಾರಿಗಳು ಹಾಗೂ ನಿಗದಿಪಡಿಸಿರುವ ಅನುದಾನದ ವಿವರವನ್ನು ಸಲ್ಲಿಸುವಂತೆ ಹಾಗೂ ಈ ಕುರಿತು ಆಯಾ ಕ್ಷೇತ್ರದ ಶಾಸಕರುಗಳ ಗಮನಕ್ಕೆ ತರುವಂತೆ ಸೂಚನೆ ನೀಡಿದರು.

ಹೊಸದುರ್ಗ ಶಾಸಕ ಬಿ.ಜಿ. ಗೋವಿಂದಪ್ಪ ಅವರು ವೇದಾವತಿ ನದಿಗೆ 2 ಕೋಟಿ ರೂ. ವೆಚ್ಚದಲ್ಲಿ ಬ್ಯಾರೇಜ್ ನಿರ್ಮಾಣ ಕಾರ್ಯ ಕೈಗೊಂಡಿದ್ದು, ಬ್ಯಾರೇಜ್ ನಿರ್ಮಾಣ ಕಾರ್ಯದ ಗುಣಮಟ್ಟ ಕಳಪೆಯಾಗಿದೆ. ಹೀಗಾಗಿ ಇದರ ಬಗ್ಗೆ ಅನ್ಯ ಇಲಾಖೆಯ ಅಧಿಕಾರಿಗಳಿಂದ ಸಂಪೂರ್ಣ ಪರಿಶೀಲನೆ ನಡೆಸಬೇಕಿದೆ. ವಾಣಿವಿಲಾಸ ಸಾಗರ ಜಲಾಶಯದ ಹಿನ್ನೀರಿನ ಮುಳುಗಡೆ ಪ್ರದೇಶದಲ್ಲಿ 02 ಕೋಟಿ ರೂ. ವೆಚ್ಚದಲ್ಲಿ ಕೌಶಲ್ಯಾಭಿವೃದ್ಧಿ ತರಬೇತಿ ಕೇಂದ್ರಕ್ಕಾಗಿ ನಿರ್ಮಿತಿ ಕೇಂದ್ರದಿಂದ ಕಟ್ಟಡ ನಿರ್ಮಿಸಲಾಗುತ್ತಿದೆ. ಇಲ್ಲಿಗೆ ತಲುಪಲು ತೆಪ್ಪದಲ್ಲಿ ತೆರಳಬೇಕು, ಅಲ್ಲದೆ ಇದಕ್ಕೆ ವಿಶ್ವೇಶ್ವರಯ್ಯ ಜಲ ನಿಗಮ ಸೇರಿದಂತೆ ಸಂಬಂಧಪಟ್ಟ ಯಾವುದೇ ಇಲಾಖೆಯಿಂದ ಯಾವುದೇ ಅನುಮತಿ ಪಡೆದಿಲ್ಲ, ಹೀಗಾಗಿ ಇದು ಅಕ್ರಮವಾಗಿದೆ. ನೀರು ಮುಳುಗಡೆಯ ನಡುಗಡ್ಡೆಯಲ್ಲಿ ಕೌಶಲ್ಯಾಭಿವೃದ್ಧಿ ತರಬೇತಿ ಕಟ್ಟಡ ಕಟ್ಟುವುದು ಸಮಂಜಸವಲ್ಲ. ಕೌಶಲ್ಯ ಅಭಿವೃದ್ಧಿಗೆ ತರಬೇತಿ ಕೇಂದ್ರವನ್ನು ಹೋಬಳಿ ಅಥವಾ ತಾಲ್ಲೂಕು ಕೇಂದ್ರದಲ್ಲಿ ತೆರೆಯಲಿ, ಅದು ಬಿಟ್ಟು ಜಲಾಶಯದ ನೀರು ಮುಳುಗಡೆಯ ಪ್ರದೇಶದಲ್ಲಿ ಕಟ್ಟುತ್ತಿರುವುದು ಎಷ್ಟರ ಮಟ್ಟಿಗೆ ಸರಿ ಎಂದು ಪ್ರಶ್ನಿಸಿದ ಅವರು, ಈ ಬಗ್ಗೆ ತನಿಖೆ ನಡೆಸಿ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದರು. ಇದಕ್ಕೆ ಪ್ರತಿಕ್ರಿಯಿಸಿದ ಸಚಿವರು, ವೇದಾವತಿ ನದಿಗೆ ಕಟ್ಟಿರುವ ಬ್ಯಾರೇಜ್‌ನ ಗುಣಮಟ್ಟದ ಬಗ್ಗೆ ಲೋಕೋಪಯೋಗಿ ಇಲಾಖೆ ಅಧಿಕಾರಿಗಳು ಪರಿಶೀಲಿಸಿ ವರದಿ ಸಲ್ಲಿಸುವಂತೆ ಸೂಚನೆ ನೀಡಿದರು, ಅಲ್ಲದೆ ಕೌಶಲ್ಯ ಅಭಿವೃದ್ಧಿ ತರಬೇತಿ ಕೇಂದ್ರ ಕಟ್ಟಡ ನಿರ್ಮಾಣದ ಬಗ್ಗೆ ವರದಿ ಪಡೆದು ಕ್ರಮ ವಹಿಸಲಾಗುವುದು ಎಂದರು.

ಡಿಎಂಎಫ್ ನಿಧಿಯಡಿ ಜಿಲ್ಲೆಯ ವಿವಿಧ ಗ್ರಾಮಗಳಲ್ಲಿ ಶುದ್ಧ ಕುಡಿಯುವ ನೀರಿನ ಘಟಕಗಳ ನಿರ್ಮಾಣ ಮಾಡಬೇಕಿದ್ದು, ಇದುವರೆಗೂ ಪೂರ್ಣಗೊಂಡಿಲ್ಲ, ಆರ್‌ಓ ಘಟಕ ನಿರ್ಮಾಣಕ್ಕೆ ಇನ್ನೂ ಎಷ್ಟು ವರ್ಷ ಕಾಯಬೇಕು ಎಂದು ವಿಧಾನಪರಿಷತ್ ಸದಸ್ಯ ಕೆ.ಎಸ್. ನವೀನ್ ಪ್ರಶ್ನಿಸಿದರು.

ಪುಟ 4

## ಫಾಸ್ಟ್ ನ್ಯೂಸ್

### ಗಣೇಶನ ಮೆರವಣಿಗೆ ನೋಡಿಕೊಂಡು ಬಂದ ಗೃಹಿಣಿ ಮನೆಯ ಹಿಂಬದಿಯ ಜಮೀನಿನಲ್ಲಿ ಸಾವು: ಅನುಮಾನ, ದೂರು

ಚಳ್ಳಕೆರೆ: ತಾಲ್ಲೂಕಿನ ಜಾಜೂರು ಗ್ರಾಮದಲ್ಲಿ ಶ್ರೀಗಣೇಶನ ವಿಸರ್ಜನೆಯ ಮೆರವಣಿಗೆ ನೋಡಿಕೊಂಡು ಮನೆಗೆ ಬಂದ ಗೃಹಿಣಿಯೊಬ್ಬಳು ಸ್ವಲ್ಪ ಸಮಯದ ನಂತರ ಮನೆಯ ಹಿಂಭಾಗದ ಜಮೀನಿನಲ್ಲಿ ಮೃತಪಟ್ಟಿದ್ದು ಮೃತಳ ಸಾವಿನ ಬಗ್ಗೆ ಶಂಕೆ ವ್ಯಕ್ತಪಡಿಸಿ ಆಕೆಯ ತಂದೆ ಚಿತ್ತಯ್ಯ ಪೊಲೀಸರಿಗೆ ದೂರು ನೀಡಿದ್ದಾನೆ. ಮೃತಪಟ್ಟ ಗೃಹಿಣಿ ಸಿ.ತೇಜಶ್ರೀ(22)ಯವರನ್ನು ಅದೇ ಗ್ರಾಮದ ಅಶೋಕನಾಯಕ ಎಂಬುವವರಿಗೆ 2016ರಲ್ಲಿ ಮದುವೆಮಾಡಿಕೊಟ್ಟಿದ್ದು ಸಮರ್ಥ ಎಂಬ ಒಂದುವರ್ಷದ ಗಂಡು ಮಗು ಇದೆ. ಭಾನುವಾರ ರಾತ್ರಿ ಗಣೇಶನ ಮೆರವಣಿಗೆ ನೋಡಿಕೊಂಡು ಗಂಡನೊಂದಿಗೆ ಇದ್ದ ತೇಜಶ್ರೀ ಬೆಳಗಿನ ಜಾವ ತನ್ನ ವಾಸದ ಮನೆಯ ಹಿಂಭಾಗದ ಜಮೀನಿನಲ್ಲಿ ಮೃತಪಟ್ಟಿರುತ್ತಾಳೆ. ಈ ಬಗ್ಗೆ ಮಾಹಿತಿ ಪಡೆದ ತಂದೆ ಚಿತ್ತಯ್ಯ ಹಾಗೂ ಬಂಧುಗಳು ಸಿ.ತೇಜಶ್ರೀ ಸಾವಿನ ಬಗ್ಗೆ ಅನುಮಾನವಿದ್ದು ಈ ಬಗ್ಗೆ ತನಿಖೆ ನಡೆಸುವಂತೆ ಪರಶುರಾಮಪುರ ಪೊಲೀಸರಿಗೆ ದೂರು ನೀಡಿರುತ್ತಾರೆ.

### ಮೋಟಾರ್ ಬೈಕ್ ಪಲ್ಟಿ ಯುವಕ ಸಾವು

ಚಳ್ಳಕೆರೆ ಠಾಣಾ ವ್ಯಾಪ್ತಿಯ ಚಿಕ್ಕಮಧುರೆ ಸೋಮಗುದ್ದು ರಸ್ತೆ ಮಧ್ಯದಲ್ಲಿ ಟಿ.ಮಣಿಕಂಠ(21) ತನ್ನ ಮೋಟಾರ್ ಬೈಕ್‌ನ್ನು ಅತಿವೇಗವಾಗಿ ಅಜಾಗರೂಕತೆಯಿಂದ ನಡೆಸಿ ಪಲ್ಟಿಯಾಗಿದ್ದು, ಟಿ.ಮಣಿಕಂಠ ತೀರ್ವ ರಕ್ತಸ್ರಾವದಿಂದ ಸ್ಥಳದಲ್ಲೇ ಮೃತಪಟ್ಟಿರುತ್ತಾನೆ. ಮೃತ ತಂದೆ ಆರ್.ತಿಪ್ಪೇಸ್ವಾಮಿ ಪೊಲೀಸರಿಗೆ ದೂರು ನೀಡಿದ್ದು ಪಿಎಸ್‌ಐ ಜೆ.ಶಿವರಾಜು ಪ್ರಕರಣ ದಾಖಲಿಸಿ ತನಿಖೆ ಮುಂದುವರೆಸಿದ್ದಾರೆ.

### ನಗರವಾರು ಟೆಂಡರ್

» ಮೊದಲ ಪುಟದಿಂದ

ಹೊಳಲ್ಕೆರೆ ಪಟ್ಟಣದಲ್ಲಿ ನೂತವಾಗಿ ನಿರ್ಮಿಸಲಾಗಿರುವ ಪುರಸಭೆ ಕಾರ್ಯಲಯದ ಪೀಠೋಪಕರಣಗಳ ಖರೀದಿಗೆ ಅನುದಾನ ಒದಗಿಸುವಂತೆ ಅಧಿಕಾರಿಗಳಿಗೆ ಹೇಳಿದರು. ಜಿಲ್ಲಾಧಿಕಾರಿ ದಿವ್ಯಪ್ರಭು.ಜಿ.ಆರ್.ಜೆ ಮಾತನಾಡಿ ಸಾರ್ವಜನಿಕರಿಗೆ ಅಗತ್ಯ ಇರುವ ತುರ್ತು ಕಾಮಗಾರಿಗಳನ್ನು ನಗರೋತ್ಥಾನದಲ್ಲಿ ಕೈಗೆತ್ತಿಕೊಳ್ಳಬೇಕು. ಅನಗತ್ಯ ಯೋಜನೆಗಳನ್ನು ರದ್ದು ಪಡಿಸಿ, ಜನಪ್ರತಿನಿಧಿಗಳ ಅಭಿಪ್ರಾಯ ಪಡೆದು ಯೋಜನೆಗಳನ್ನು ರೂಪಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು.ಸಭೆಯಲ್ಲಿ ನಗರೋತ್ಥಾನ ಯೋಜನೆಯಡಿ ಇನ್ನೂ ಪ್ರಾರಂಭವಾಗದಿರುವ, ಹಾಗೂ ಟೆಂಡರ್ ಕರೆಯಲು ಬಾಕಿ ಇರುವ, ಕಾರ್ಯಾದೇಶ ನೀಡಬೇಕಾಗಿರುವ ಮತ್ತು ಮುಂದುವರಿಸಬೇಕಾದ ಕಾಮಗಾರಿಗಳ ಕುರಿತು ಚರ್ಚಿಸಿ,ಸರ್ಕಾರಅನುಮೋದನೆಗಾಗಿಮಂಡಿಸಲು ತೀರ್ಮಾನಿಸಲಾಯಿತು.ನಗರಾಭಿವೃದ್ಧಿ ಕೋಶದ ಯೋಜನ ನಿರ್ದೇಶಕ ಎನ್.ಮಹೇಂದ್ರ ಕುಮಾರ್, ಲೋಕೋಪಯೋಗಿ ಇಲಾಖೆ ಕಾರ್ಯಪಾಲಕ ಅಭಿಯಂತರ ಮಲ್ಲಿಕಾರ್ಜುನ ಸೇರಿದಂತೆ ಎಲ್ಲಾ ನಗರ, ಪಟ್ಟಣ ಹಾಗೂ ಪುರಸಭೆ ಮುಖ್ಯಾಧಿಕಾರಿಗಳು, ಆಡಳಿತಾಧಿಕಾರಿಗಳು, ತಹಸಿಲ್ದಾರರು ಸೇರಿದಂತೆ ಇತರೆ ಅಧಿಕಾರಿಗಳು ಉಪಸ್ಥಿತರಿದ್ದರು.

### ಕ್ರೀಡಾಪಟುಗಳಿಗೆ ಸೂಕ್ತ ಮಾರ್ಗದರ್ಶನ ಅಗತ್ಯ



» ಚಿತ್ರದುರ್ಗ

ಗ್ರಾಮೀಣ ಭಾಗದ ಕ್ರೀಡಾಪಟುಗಳಿಗೆ ಸರಿಯಾದ ತರಬೇತಿ ಹಾಗೂ ಸೂಕ್ತ ಮಾರ್ಗದರ್ಶನ ಸಿಕ್ಕಾಗ ಮಾತ್ರ ತಮ್ಮಲ್ಲಿರುವ ಪ್ರತಿಭೆಯನ್ನು ಹೊರಹೊಮ್ಮಿಸಲು ಸಾಧ್ಯ ಎಂದು ಕಲ್ಲಹಳ್ಳಿಯಲ್ಲಿರುವ ಬಾಪೂಜಿ ಗ್ರಾಮಾಂತರ ಪ್ರೌಢಶಾಲೆ ಮುಖ್ಯ ಶಿಕ್ಷಕ ಎಸ್.ಅಂಜನಪ್ಪ ತಿಳಿಸಿದರು. 2023–24 ನೇ ಸಾಲಿನಲ್ಲಿ ನಡೆದ ಪ್ರೌಢಶಾಲಾ ಹಂತದ ಕ್ರೀಡಾಕೂಟದ ವಾಕ್‌ರೇಸ್ ವಿಭಾಗ ಜಿಲ್ಲಾ ಮಟ್ಟದಲ್ಲಿ ಭಾಗವಹಿಸಿ ಪ್ರಥಮ ಸ್ಥಾನ ಗಳಿಸಿ ರಾಜ್ಯ ಮಟ್ಟಕ್ಕೆ ಆಯ್ಕೆಯಾಗಿರುವ ಬಾಪೂಜಿ ಗ್ರಾಮಾಂತರ ಪ್ರೌಢಶಾಲೆಯ 9 ನೇ ತರಗತಿ ವಿದ್ಯಾರ್ಥಿ ಎಸ್.ಅಜಯ್‌ಕುಮಾರ್ ಹಾಗೂ ತರಬೇತುದಾರ ದೈಹಿಕ ಶಿಕ್ಷಕ ಆರ್.ಪ್ರದೀಪ್ ಇವರುಗಳನ್ನು ಶಾಲಾ ಆವರಣದಲ್ಲಿ ಗಾಂಧಿ ಜಯಂತಿಯಂದು ಸನ್ಮಾನಿಸಿ ಮಾತನಾಡಿದರು. ನಮ್ಮ ಶಾಲೆಗೆ ಅನುಭವಿ ತರಬೇತುದಾರರು ದೊರಕಿರುವುದರಿಂದ ಜಿಲ್ಲಾ ಮಟ್ಟದ ವಾಕ್‌ರೇಸ್ ವಿಭಾಗದಲ್ಲಿ ವಿದ್ಯಾರ್ಥಿ ಎಸ್.ಅಜಯ್‌ಕುಮಾರ್ ಪ್ರಥಮ ಸ್ಥಾನ ಗಳಿಸಿ ರಾಜ್ಯ ಮಟ್ಟಕ್ಕೆ ಆಯ್ಕೆಯಾಗಲು ಸಾಧ್ಯವಾಯಿತು. ರಾಜ್ಯಮಟ್ಟದಲ್ಲಿಯೂ ಜಯಶಾಲಿಯಾಗಿ ಜಿಲ್ಲೆಗೆ ಕೀರ್ತಿ ತರಲಿ ಎಂದು ಹಾರೈಸಿದರು. ಗ್ರಾಮೀಣ ಶಾಲೆಗಳಲ್ಲಿ ಸುಸಜ್ಜಿತ ಕ್ರೀಡಾಂಗಣ, ನುರಿತ ತರಬೇತಿದಾರರುಗಳಿಲ್ಲದೆ ಅಸಂಖ್ಯಾತ ಕ್ರೀಡಾಪಟುಗಳು ಅವಕಾಶ ವಂಚಿತರಾಗುತ್ತಿದ್ದಾರೆ.

# ಮೊಳಕಾಲ್ಮುರು ಸಿವಿಲ್ ನ್ಯಾಯಾಲಯ ಮತ್ತು ಪಟ್ಟಣ ಪಂಚಾಯಿತಿ ವತಿಯಿಂದ ಸ್ವಚ್ಛತಾ ಕಾರ್ಯಕ್ರಮ

» ಮೊಳಕಾಲ್ಮುರು

ಜೆ.ಎಂ.ಎಫ್.ಸಿ ಮತ್ತು ಸಿವಿಲ್ ನ್ಯಾಯಾಲಯ ಹಾಗೂ ಪಟ್ಟಣ ಪಂಚಾಯಿತಿ ಮೊಳಕಾಲ್ಮೂರು ಸಂಯುಕ್ತಾಶ್ರಯದಲ್ಲಿ ಸ್ವಚ್ಚತೆಯೇ ಸೇವೆ ಕಾರ್ಯಕ್ರಮ ನಡೆಸಲಾಯಿತು.

ಕೇಂದ್ರ ಸರ್ಕಾರ, ಪೌರಾಡಳಿತ ನಿರ್ದೇಶನಾಲಯ, ಬೆಂಗಳೂರು ಹಾಗೂ ಜಿಲ್ಲಾಡಳಿತ, ಚಿತ್ರದುರ್ಗ ರವರ ಸೂಚನೆ ನಿರ್ದೇಶನದಂತೆ "ಸ್ವಚ್ಚತೆಯೇ ಸೇವೆ" ಅಭಿಯಾನದಡಿ ಮೊಳಕಾಲ್ಮೂರು ಪಟ್ಟಣದ ವ್ಯಾಪ್ತಿಯಲ್ಲಿರುವ ಪ್ರಸಿದ್ಧ ಪ್ರವಾಸಿ ತಾಣಗಳು, ಧಾರ್ಮಿಕ ಸ್ಥಳಗಳು, ಸರ್ಕಾರಿ ಕಛೇರಿಗಳು, ಶಾಲಾ ಕಾಲೇಜುಗಳು, ನ್ಯಾಯಾಲಯ, ಕೊಳಚೆ ಪ್ರದೇಶಗಳು, ಖಾಸಗಿ ಬಸ್ ನಿಲ್ದಾಣ, ಸಾರ್ವಜನಿಕ ಪ್ರದೇಶಗಳ ಸ್ವಚ್ಚತಾ ಕಾರ್ಯಕ್ರಮಗಳನ್ನು ಮಾಡಲಾಯಿತು

.ಕಾರ್ಯಕ್ರಮದ ಅಂಗವಾಗಿ ಮೊಳಕಾಲ್ಮೂರು ಪಟ್ಟಣದ ಜೆ.ಎಂ. ಎಫ್.ಸಿ ಮತ್ತು ಸಿವಿಲ್ ನ್ಯಾಯಾಲಯ ಆವರಣದ ಸ್ವಚ್ಚತಾ ಕಾರ್ಯಕ್ರಮವನ್ನು ನಡೆಸಲಾಯಿತು.



ಮಾನ್ಯ ಹಿರಿಯ ನ್ಯಾಯಾಧೀಶರಾದ ಶ್ರೀಮತಿ ರೇಷ್ಮಾ ಕಲಕಪ್ಪ ಕೋಣಿ ರವರು ಮಾತನಾಡಿ ಸ್ವಚ್ಚತೆ ಕೇವಲ ಪಟ್ಟಣ ಪಂಚಾಯಿತಿಯ ಜವಾಬ್ದಾರಿಯಲ್ಲ ಸ್ವಚ್ಚತೆ ಕಾಪಾಡಿಕೊಳ್ಳುವುದು ನಮ್ಮೆಲ್ಲರ ಜವಾಬ್ದಾರಿ ನಾವುಗಳು ವಾಸಮಾಡುವ, ಕೆಲಸ ಮಾಡುವ ಸ್ಥಳಗಳನ್ನು ಸ್ವಚ್ಚಗೊಳಿಸಿಕೊಂಡರೇ ಸಾಕು ಎಲ್ಲಾ ಇಲಾಖೆಗಳು ಸಂಘ ಸಂಸ್ಥೆಗಳು ಸ್ವಯಂ ಪ್ರೇರಿತವಾಗಿ ತಮ್ಮ ತಮ್ಮ ಕಛೇರಿಗಳನ್ನು, ವಾಸವಿರುವ ಸ್ಥಳಗಳನ್ನು, ಸಾರ್ವಜನಿಕ ಸ್ಥಳಗಳನ್ನು ಸ್ವಚ್ಚಗೊಳಿಸಬೇಕೆಂದು ತಿಳಿಸಿದರು.

ಶ್ರೀಮತಿ ಪ್ರಿಯಾಂಕ ಸಿವಿಲ್ ಜಡ್ಜ್ ಅಂಡ್ ಜೆಎಂಎಫ್‌ಸಿ ನ್ಯಾಯಾಲಯ ಮೊಳಕಾಲ್ಮೂರು ಇವರು ಮಾತನಾಡಿ ಪ್ರತಿಯೊಬ್ಬರು ತಮ್ಮ ಮನೆಗಳ ಸುತ್ತಮುತ್ತ ಸ್ವಚ್ಛತೆ ಇಟ್ಟುಕೊಂಡರೆ ರೋಗಗಳು ಬರುವುದಿಲ್ಲ ನಾಗರಿಕರೆಲ್ಲರೂ ಕೂಡ ಸ್ವಚ್ಛತೆ ಬಗ್ಗೆ ಹೆಚ್ಚಿನ ಗಮನ ಕೊಡಬೇಕು ತಮ್ಮ ಸುತ್ತಮುತ್ತ ಪರಿಸರವನ್ನು ಸ್ವಚ್ಛವಾಗಿ ಇಟ್ಟುಕೊಳ್ಳಬೇಕು ಎಂದರು.

ಶ್ರೀಮತಿ ರೂಪ ಎಂ ವಿ ತಹಶೀಲ್ದಾರರು ಹಾಗೂ ಆಡಳಿತ ಅಧಿಕಾರಿಗಳು ಪಟ್ಟಣ ಪಂಚಾಯತಿ ಮೊಳಕಾಲ್ಮೂರು ರವರು ಸಿವಿಲ್ ಜಡ್ಜ್ ಅಂಡ್ ಜೆಎಂಎಫ್‌ಸಿ ನ್ಯಾಯಾಲಯ ಮೊಳಕಾಲ್ಮೂರು ರವರು ಮಾತನಾಡಿ ಪ್ರತಿಯೊಬ್ಬರು ತಮ್ಮ ಮನೆಗಳಲ್ಲಿ ಉತ್ಪತ್ತಿಯಾಗುವ ತ್ಯಾಜ್ಯವನ್ನು ಹಸಿ ಕಸ, ಒಣ ಕಸ ಮತ್ತು ಅಪಾಯಕಾರಿ ಕಸವನ್ನಾಗಿ ವಿಂಗಡಿಸಿ ಪಟ್ಟಣ ಪಂಚಾಯಿತಿಯ ವಾಹನಕ್ಕೆ ನೀಡಬೇಕು ಪರಿಸರಕ್ಕೆ ಹಾನಿಯಾಗುವ ಪ್ಲಾಸ್ಟಿಕನ್ನು ನಿಷೇಧಿಸಿದ್ದು ಏಕ ಬಳಕೆ ಪ್ಲಾಸ್ಟಿಕ್ ಅನ್ನು ಬಳಸಬಾರದು ಎಂದು ತಿಳಿಸಿದರು..

ಸಂದರ್ಭದಲ್ಲಿ ಜೆ.ಎಂ.ಎಫ್.ಸಿ ಮತ್ತು ಸಿವಿಲ್ ನ್ಯಾಯಾಲಯ ಹಾಗೂ ಸಿಬ್ಬಂದಿಗಳು, ವಕೀಲರ ಸಂಘದ ಅಧ್ಯಕ್ಷರಾದ ಆನಂದ್ ರವರು ಹಾಗೂ ವಕೀಲರು ಪಟ್ಟಣ ಪಂಚಾಯತಿಯ ಮುಖ್ಯಾಧಿಕಾರಿಗಳಾದ ಶ್ರೀಮತಿ ಲೀಲಾವತಿ ಇ, ಆರೋಗ್ಯ ನಿರೀಕ್ಷಕರಾದ ಶ್ರೀನಿವಾಸ್ , ಶ

ಮರಿಸ್ವಾಮಿ, ಶಫಿವುಲ್ಲಾ, ಚಂದ್ರಪ್ಪ, ಸಿದ್ದಪ್ಪ, ಮಂಜಪ್ಪ ಪೌರಕಾರ್ಮಿಕರು, ವಾಹನ ಚಾಲಕರು ಮುಂತಾದವರು ಉಪಸ್ಥಿತರಿದ್ದರು..

### ಗಾಂಧಿ ಜಯಂತಿ ಪ್ರಯುಕ್ತ ಸ್ವಯಂ ರಕ್ತದಾನ ಶಿಬಿರ

# ವಾಣಿಜ್ಯೋದ್ಯಮಿಗಳ ಸಾಮಾಜಿಕ ಕಳಕಳಿ ಮೆಚ್ಚುವಂತಹದ್ದು: ಶಾಸಕ ರಘುಮೂರ್ತಿ

» ಚಳ್ಳಕೆರೆ

ಕಳೆದ ಹಲವಾರು ವರ್ಷಗಳಿಂದ ಇಲ್ಲಿನ ಕೃಷಿ ಉತ್ಪನ್ನ ಮಾರುಕಟ್ಟೆ ಆರ್ಥಿಕವಾಗಿ ನಿರೀಕ್ಷಿತ ಲಾಭಗಳಿಸದೇ ಇದ್ದರೂ ರೈತರಿಗೆ ಹಾಗೂ ಸಾರ್ವಜನಿಕರಿಗೆ ಉಪಯುಕ್ತವಾಗುವಂತಹ ಕಾರ್ಯಕ್ರಮಗಳನ್ನು ರೂಪಿಸುವ ಮೂಲಕ ತನ್ನ ಕಾಳಜಿಯನ್ನು ಪ್ರದರ್ಶಿಸಿದೆ ಎಂದು ಶಾಸಕ ಟಿ.ರಘುಮೂರ್ತಿ ತಿಳಿಸಿದರು.

ಅವರು, ಇಲ್ಲಿನ ಕೃಷಿ ಉತ್ಪನ್ನ ಮಾರುಕಟ್ಟೆ ಆವರಣದಲ್ಲಿ ಗಾಂಧಿ ಜಯಂತಿ ಹಾಗೂ ಸ್ವಚ್ಚತಾ ಕೀ ಸೇವಾ ಅಂಗವಾಗಿ ಹಮ್ಮಿಕೊಂಡಿದ್ದ ಸ್ವಯಂ ರಕ್ತದಾನ ಶಿಬಿರಕ್ಕೆ ಚಾಲನೆ ನೀಡಿ ಮಾತನಾಡಿದರು. ಇತ್ತೀಗಷ್ಟೇ ವಿಘ್ನವಿನಾಶಕ ಶ್ರೀಗಣೇಶನನ್ನು ಅದ್ದೂರಿಯಾಗಿ ಪೂಜಿಸಿ ಎಲ್ಲರಿಗೂ ಒಳ್ಳೆಯದ್ದನ್ನು ಬಯಸಿ ಗಣೇಶನ ವಿಸರ್ಜನೆ ಮಾಡಿದ ಬೆನ್ನಹಿಂದೆಯೇ ಸ್ವಯಂ ರಕ್ತದಾನ ಶಿಬಿರದ ಮೂಲಕ ಜನರ ಆರೋಗ್ಯದ ಬಗ್ಗೆ ಜಾಗೃತಿ ವಹಿಸಿರುವುದು ಸಂತಸ ವಿಷಯವೆಂದರು. ದಲ್ಲಾಲರ ಸಂಘದ ಅಧ್ಯಕ್ಷ ಕೆ.ಎಂ.ಅರವಿಂದ, ನಗರಸಭಾ ಸದಸ್ಯ ಕೆ.ಸಿ.ನಾಗರಾಜು,ವರ್ತಕರಾದಕೋದಂಡರಾಮ, ಡಿ.ಎಂ.ತಿಪ್ಪೇಸ್ವಾಮಿ, ವೆಂಕಟನಾಗರಾಜು, ಸುಬ್ರಮಣ್ಯ, ರಾಘವೇಂದ್ರಕುಂಚಂ, ಶ್ರೀನಿವಾಸ್, ಸತೀಶ್, ಈಶ್ವರಪ್ಪ ವೃಷಬೇಂದ್ರಪ್ಪ, ಕಾರ್ಯದರ್ಶಿ ಸುರೇಶ್ ಮುಂತಾದವರು ಉಪಸ್ಥಿತರಿದ್ದರು.




### ಗಾಂಧಿ ಮತ್ತು ಶಾಸ್ತ್ರೀಜಿ ಜಯಂತಿ ಅಂಗವಾಗಿ ಸ್ವಚ್ಚತಾ ಕಾರ್ಯಕ್ರಮ



» ದಾವಣಗೆರೆ

ರಾಷ್ಟ್ರಪಿತ ಮಹಾತ್ಮ ಗಾಂಧಿ ಹಾಗೂ ಲಾಲ್ ಬಹದ್ದೂರ್ ಶಾಸ್ತ್ರಿ ಜನ್ಮದಿನದ ಅಂಗವಾಗಿ ಜಿಲ್ಲಾ ನ್ಯಾಯಾಲಯದ ಹಾಗೂ ಎಲ್ಲಾ ನ್ಯಾಯಾಲಯಗಳ ವ್ಯಾಪ್ತಿಗಳಲ್ಲಿ ಕಳೆದ ಒಂದು ವಾರದಿಂದ ಹಲವಾರು ಕಾರ್ಯಕ್ರಗಳನ್ನು ಹಮ್ಮಿಕೊಳ್ಳಲಾಗಿತ್ತು.ಡಿ.ದೇವರಾಜು ಅರಸು ಕಾಲೋನಿಯಲ್ಲಿರುವ ಜಿಲ್ಲಾ ನ್ಯಾಯಾಲಯಗಳ ಸಂಕೀರ್ಣದಲ್ಲಿ ಸ್ವಚ್ಚತಾ ಕಾರ್ಯಕ್ರಮವನ್ನು ಹಮ್ಮಿಕೊಂಡು, ನ್ಯಾಯಾಲಯದ ಆವರಣವನ್ನು ಸ್ವಚ್ಚತೆ ಮಾಡಿ ಕಸ, ಕಡ್ಡಿಯನ್ನು ಆಯ್ದು ಸಂಪೂರ್ಣ ಆವರಣವನ್ನು ಸ್ವಚ್ಚಗೊಳಿಸಿ ಸ್ವಚ್ಚತಾ ಅರಿವು ಮೂಡಿಸಲಾಯಿತು. ಸ್ವಚ್ಚತ ಕಾರ್ಯದಲ್ಲಿ ತೊಡಗಿದ ನ್ಯಾಯಲಯ ಸಿಬ್ಬಂದಿಗಳನ್ನು ಸನ್ಮಾನಿಸಿ ಗೌರವಿಸಲಾಯಿತು. ಈ ಸಂಧರ್ಭದಲ್ಲಿ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ರಾಜೇಶ್ವರಿ ಎನ್ ಹೆಗೆಡೆ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮಹಾವೀರ ಮ. ಕರೆಣ್ಣವರ ಹಾಗೂ ಜಿಲ್ಲೆಯ ಎಲ್ಲಾ ಜಿಲ್ಲಾ ನ್ಯಾಯಾಧೀಶರುಗಳು ಮತ್ತು ಹಿರಿಯ ಸಿವಿಲ್ ನ್ಯಾಯಾಧೀಶರು ಉಪಸ್ಥಿತರಿದ್ದರು.

### ನಾಯಕನಹಟ್ಟಿ ಪಟ್ಟಣದ ನಾಡಕಚೇರಿಯಲ್ಲಿ ಮಹಾತ್ಮ ಗಾಂಧಿ ಜಯಂತಿ

» ನಾಯಕನಹಟ್ಟಿ

ಮಹಾತ್ಮ ಗಾಂಧೀಜಿಯವರು ತಮ್ಮ ಇಡೀ ಜೀವನವನ್ನು ದೇಶಕ್ಕಾಗಿ ಮುಡುಪಾಗಿ ಇಟ್ಟ ವ್ಯಕ್ತಿ ಜನರು ಅವರನ್ನು ರಾಷ್ಟ್ರೀಪಿತ ಎಂದು ಕರೆಯುವುದರಲ್ಲಿ ಯಾವುದೇ ಸಂಶಯವಿಲ್ಲ ಎಂದು ನಾಡಕಛೇರಿಯ ಉಪತಹಶೀಲ್ದಾರ್ ಶಕುಂತಲ.ಬಿ ಹೇಳಿದರು.ಪಟ್ಟಣದ ನಾಡಕಛೇರಿಯಲ್ಲಿ ಮಹಾತ್ಮ ಗಾಂಧಿ ಜಯಂತಿ ಪ್ರಯುಕ್ತ ವಿಶೇಷವಾಗಿ ಮಾತನಾಡಿದ ಅವರು ಮಹಾತ್ಮ ಗಾಂಧೀಜಿಯವರು ಬ್ರಿಟೀಷ್ ಆಳ್ವಿಕೆಯ ವಿರುದ್ಧ ಭಾರತೀಯ ರಾಷ್ಟ್ರೀಯ ಚಳುವಳಿಯ ಅಗ್ರಗಣ್ಯ ನಾಯಕರಾಗಿ ಗುರುತಿಸಲ್ಪಟ್ಟಿದ್ದಾರೆ. ಇವರಿಗೆ ರಾಷ್ಟ್ರೀಪಿತ ಗೌರವ ಸಂದಿದೆ ಎಂದು ಅವರು ಹೇಳಿದರು. ಈ ಸಂದರ್ಭದಲ್ಲಿ ಉಪಸ್ಥಿತಿರಾದ ನಾಡಕಛೇರಿಯ ರಾಜಸ್ವ ನಿರೀಕ್ಷಕರು ಚೇತನ್‌ಕುಮಾರ್, ಗ್ರಾಮ ಲೆಕ್ಕಾಧಿಕಾರಿಗಳು, ಸಿಬ್ಬಂದಿಗಳು ಇದ್ದರು.






ಚಳ್ಳಕೆರೆ ತಾಲ್ಲೂಕಿನ ನಗರಂಗೆರೆ ಗ್ರಾಮ ಪಂಚಾಯಿತಿ ಆವರಣದಲ್ಲಿ ಸ್ವಚ್ಚತಾ ಹೀ ಅಭಿಯಾನಕ್ಕೆ ಗ್ರಾಮ ಪಂಚಾಯಿತಿ ಅಧ್ಯಕ್ಷೆ ನಾಗವೇಣಿ ಚಾಲನೆ ನೀಡಿದರು.

**ಪ್ರಮುಖ ಸುದ್ದಿ**

### ದಾವಣಗೆರೆ ವಿಶ್ವವಿದ್ಯಾನಿಲಯದಲ್ಲಿ ಮಹಾತ್ಮ ಗಾಂಧಿ ಮತ್ತು ಲಾಲ ಬಹದ್ದೂರ ಶಾಸ್ತ್ರಿ ಅವರ ಜನ್ಮದಿನಾಚರಣೆ


# ಗ್ರಾಮ ಅಭಿವೃದ್ಧಿಗೆ ಗಾಂಧಿ ಪ್ರೇರಣೆ ಕಾರ್ಯಕ್ರಮ: ಪ್ರೊ.ಕುಂಬಾರ

» ದಾವಣಗೆರೆ

ಪ್ರಸಕ್ತ ಶೈಕ್ಷಣಿಕ ವರ್ಷದಿಂದಲೇ ದಾವಣಗೆರೆ ವಿಶ್ವವಿದ್ಯಾನಿಲಯವು 'ಗಾಂಧಿ ಪ್ರೇರಣೆ' ವಿಶೇಷ ಕಾರ್ಯಕ್ರಮ ರೂಪಿಸಿ ಅದರ ಮೂಲಕ ತನ್ನ ಕಾರ್ಯ ವ್ಯಾಪ್ತಿಯ ಕುಗ್ರಾಮಗಳನ್ನು ದತ್ತು ಪಡೆದು ಅಭಿವೃದ್ಧಿಪಡಿಸಲು ಹಮ್ಮಿಕೊಳ್ಳಲಿದೆ ದಾವಣಗೆರೆ ವಿಶ್ವವಿದ್ಯಾನಿಲಯದ ಕುಲಪತಿ ಪ್ರೊ.ಬಿ.ಡಿ.ಕುಂಬಾರ ತಿಳಿಸಿದರು.

ದಾವಣಗೆರೆ ವಿಶ್ವವಿದ್ಯಾನಿಲಯದಲ್ಲಿ ಮಹಾತ್ಮ ಗಾಂಧಿ ಮತ್ತು ಲಾಲ ಬಹದ್ದೂರ ಶಾಸ್ತ್ರಿ ಅವರ ಭಾವಚಿತ್ರಕ್ಕೆ ಮಾಲಾರ್ಪಣೆ ಮಾಡಿದ ನಂತರ ನಡೆದ ನಡೆದ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ದಾವಣಗೆರೆಮತ್ತುಚಿತ್ರದುರ್ಗಜಿಲ್ಲೆಯಲ್ಲಿ 15ರಿಂದ 20 ಗ್ರಾಮಗಳನ್ನು ದತ್ತು ಪಡೆದು ಸಮಗ್ರ ಅಭಿವೃದ್ಧಿಗೆ ಆದ್ಯತೆ ನೀಡುವುದು. ವಿಶ್ವವಿದ್ಯಾನಿಲಯದ ಪ್ರತಿಯೊಬ್ಬ ಪ್ರಾಧ್ಯಾಪಕರೂ ತಿಂಗಳಿಗೊಮ್ಮೆಯಾದರೂ ಗ್ರಾಮಕ್ಕೆ ಭೇಟಿ ನೀಡಿ ಮಕ್ಕಳ ಶೈಕ್ಷಣಿಕ ಪ್ರಗತಿಗೆ ಕೈಜೋಡಿಸುವರು. ಆ ಮೂಲಕ ಗ್ರಾಮಗಳಲ್ಲಿ ಶಿಕ್ಷಣ, ಆರೋಗ್ಯ, ಮೂಲಸೌಲಭ್ಯಗಳು ದೊರಕಿಸಿಕೊಡುವ ಕೆಲಸವನ್ನು ಇದನ್ನು ಗಾಂಧಿ ಪ್ರೇರಣೆ ಕಾರ್ಯಕ್ರಮವನ್ನಾಗಿ ಆಚರಿಸಲಾಗುವುದು ಎಂದು ತಿಳಿಸಿದರು.



ಗಾಂಧೀಜಿಅವರಗ್ರಾಮಸ್ವರಾಜ್ಯವುಎಲ್ಲರ ಸಹಭಾಗಿತ್ವ, ಸಹಕಾರದ ದುಡಿಮೆಯಿಂದ ನಿರ್ಮಾಣಗೊಳ್ಳುವುದು. ಪ್ರತಿಯೊಬ್ಬ ವ್ಯಕ್ತಿಯೂ ತನ್ನ ಜವಾಬ್ದಾರಿಯನ್ನು ಅರ್ಥ ಮಾಡಿಕೊಂಡು ಸತ್ಯ, ನಿಷ್ಠೆ, ಪ್ರಾಮಾಣಿಕತೆ, ನಿಸ್ವಾರ್ಥ ಹಾಗೂ ಸ್ವಾಭಿಮಾನದಿಂದ ಕೆಲಸ ಮಾಡಿದಾಗ ಸ್ವಾವಲಂಬಿ ಭಾರತವನ್ನು ಕಾಣಬಹುದು. ಗಾಂಧೀಜಿ ಅವರ ತತ್ವಾದರ್ಶಗಳನ್ನು ಪಾಲನೆಗಾಗಿ ಪ್ರತಿಯೊಬ್ಬರೂ ಸಂಕಲ್ಪ ಮಾಡುವುದು ಅತ್ಯಗತ್ಯ ಎಂದು ವಿವರಿಸಿದರು.

'ಗಾಂಧೀಜಿ ಅವರ ಆದರ್ಶ, ತತ್ವ, ಸಂದೇಶಗಳನ್ನು ನಮಗೆ ಗೊತ್ತಿಲ್ಲದೆ ಹಲವಾರು ಸಂದರ್ಭದಲ್ಲಿ ಆಚರಿಸುತ್ತೇವೆ. ನ್ಯಾಯಕ್ಕಾಗಿ ಹೋರಾಟ ನಡೆದಾಗ ಗಾಂಧೀಜಿಯವರ ಸತ್ಯಾಗ್ರಹ, ಅಹಿಂಸಾ ತತ್ವ ಪಾಲನೆಯಾಗುತ್ತದೆ. ಆದರೆ ಗಾಂಧೀಜಿ ಮಾತ್ರ ವರ್ಷಕ್ಕೊಮ್ಮೆ ನೆನಪಾಗುತ್ತಿರುವುದು ವಿಪರ್ಯಾಸ' ಎಂದರು.

ಮಹಾತ್ಮ ಗಾಂಧೀಜಿ ಮತ್ತು ಲಾಲ ಬಹದ್ದೂರ ಶಾಸ್ತ್ರಿ ಅವರ ಸರಳ ಜೀವನ, ಭವ್ಯ ಭಾರತದ ಕಲ್ಪನೆ, ಕ್ರಿಯಾಶಕ್ತಿಗಳು ಯುವಜನರಿಗೆ ಪ್ರೇರಣೆಯಾಗಬೇಕು. ಅಹಿಂಸಾತ್ಮಕ ಹೋರಾಟದಿಂದ ಯಶಸ್ಸು ಸಾಧ್ಯ ಎಂಬುದನ್ನು ಇಬ್ಬರೂ ಮಹನೀಯರು ಸಾಬೀತುಪಡಿಸಿದ್ದಾರೆ. ಅವರ ಸರ್ವೋದಯ, ಅಹಿಂಸಾ, ಸತ್ಯ, ಸಾಮಾಜಿಕ ನ್ಯಾಯ ತತ್ವಗಳು ಕೇವಲ ಹೇಳಿಕೆಗಷ್ಟೆ ಸೀಮಿತವಾಗದೆ ಕಾರ್ಯಪಾಲನೆಯಲ್ಲಿ ಜಾರಿಗೊಂಡಾಗ ರಾಮರಾಜ್ಯ ಪರಿಕಲ್ಪನೆಯ ಸದೃಢ ಗ್ರಾಮಭಾರತವನ್ನು ಕಾಣಬಹುದು ಎಂದು ಹೇಳಿದರು.

ಕಲಾ ನಿಕಾಯದ ಡೀನ್ ಪ್ರೊ. ವೆಂಕಟರಾವ್ ಪಲಾಟೆ ಅವರು ವಿಶೇಷ ಉಪನ್ಯಾಸ ನೀಡಿ, ಗಾಂಧೀಜಿ ಮತ್ತು ಲಾಲ ಬಹದ್ದೂರ ಶಾಸ್ತ್ರಿ ಅವರ ಜೀವನ ಶೈಲಿ, ಕಾರ್ಯ ವೈಖರಿಯಲ್ಲಿ ಸಾಮ್ಯತೆಯನ್ನು ಕಾಣಬಹುದು. ಇಬ್ಬರದೂ ಸರಳ ವ್ಯಕ್ತಿತ್ವ, ನೇರ ನಡೆಯ ಪ್ರಾಮಾಣಿಕ ವ್ಯಕ್ತಿಗಳು. ಅವರ ದೇಶಾಭಿಮಾನ, ಗ್ರಾಮೀಣ ಅಭಿವೃದ್ಧಿಯ ಯೋಜನೆಗಳು, ಸಾಮಾಜಿಕ ಚಿಂತನೆ, ಆರ್ಥಿಕ ಪರಿಕಲ್ಪನೆಗಳು ಸ್ವತಂತ್ರ ಭಾರತದ ಭದ್ರತೆಗೆ ಬುನಾದಿ ಹಾಕಿವೆ ಎಂದು ನುಡಿದರು.

ಹಳ್ಳಿಗಳನ್ನೇ ಹೆಚ್ಚಾಗಿ ಹೊಂದಿರುವ ಭಾರತದಲ್ಲಿ ಬೃಹತ್ ಕೈಗಾರಿಕೆಗಳಿಗಿಂತ ಗಾಂಧೀಜಿ ಅವರ ಸಲಹೆಯಂತೆ ಗುಡಿ ಕೈಗಾರಿಕೆಗಳು ಹೆಚ್ಚಬೇಕು. ದೇಶದ ಎಲ್ಲ ಜನರಿಗೂ ಕೆಲಸ ನೀಡುವ ಗುಡಿ ಕೈಗಾರಿಕೆಗಳು ನಿರುದ್ಯೋಗ, ಬಡತನ, ಅನಕ್ಷರತೆ ಸೇರಿದಂತೆ ಎಲ್ಲ ಸಮಸ್ಯೆಗಳಿಗೆ ಏಕೈಕ ಪರಿಹಾರ ಮಾರ್ಗವಾಗಿದೆ ಎಂದು ಹೇಳಿದರು.

ಕುಲಸಚಿವೆ ಬಿ.ಬಿ.ಸರೋಜ, ಪರೀಕ್ಷಾಂಗ ಕುಲಸಚಿವ ಡಾ.ಕೆ.ಶಿವಶಂಕರ, ಹಣಕಾಸು ಅಧಿಕಾರಿ ಪ್ರೊ.ಆರ್.ಶಶಿಧರ ಮಾತನಾಡಿದರು. ಹಿಂದುಳಿದ ವರ್ಗಗಳ ಘಟಕದ ಸಂಚಾಲಕ ಡಾ.ನಾಗಭೂಷಣಗೌಡ ಸ್ವಾಗತಿಸಿ, ಪ್ರಾಸ್ತಾವಿಕವಾಗಿ ಮಾತನಾಡಿದರು. ಜಿ.ಎಂ. ರೂಪಾ ಕಾರ್ಯಕ್ರಮ ನಿರೂಪಿಸಿ, ವಂದಿಸಿದರು.

## ಫಾಸ್ಟ್ ನ್ಯೂಸ್

### ವಿಭಾಗೀಯ ಡಾಕ್ ಅದಾಲತ್ ಅ. 12 ಕ್ಕೆ

ದಾವಣಗೆರೆ: ನಗರದ ಮಂಡಿಪೇಟೆಯ ಗಡಿಯಾರ ಕಂಬದ ಹತ್ತಿರದ ಪ್ರಧಾನ ಅಂಚೆ ಕಚೇರಿಯ ಮೊದಲನೇ ಮಹಡಿಯ ಜಿಲ್ಲಾ ಅಂಚೆ ಅಧೀಕ್ಷಕರ ಕಚೇರಿಯಲ್ಲಿ ಅಕ್ಟೋಬರ್ 12 ರಂದು ಸಂಜೆ 4 ಗಂಟೆಗೆ ಅಂಚೆ ವಿಭಾಗೀಯ ಡಾಕ್ ಅದಾಲತ್‌ನ್ನು ಆಯೋಜಿಸಲಾಗಿದೆ ಎಂದು ದಾವಣಗೆರೆ ವಿಭಾಗದ ಅಂಚೆ ಅಧೀಕ್ಷಕ ಚಂದ್ರಶೇಖರ್ ತಿಳಿಸಿದ್ದಾರೆ.

### ವಿಕಲಚೇತನ ವಧು-ವರರ ಸಮಾವೇಶ

ದಾವಣಗೆರೆ: ಕೊಪ್ಪಳ ಜಿಲ್ಲೆಯ ಯಲಬುರ್ಗಾದ ಶ್ರೀ ವೀರಭದ್ರೇಶ್ವರ ವಿಕಲಚೇತನರ ಗ್ರಾಮೀಣಾಭಿವೃದ್ಧಿ ಹಾಗೂ ಶಿಕ್ಷಣ ಸಂಸ್ಥೆ (ರಿ)ಯ ವತಿಯಿಂದ ರಾಜ್ಯದಲ್ಲಿ ಪ್ರಥಮ ಬಾರಿಗೆ ವಿಕಲಚೇತನ ವಧು-ವರರ ಸಮಾವೇಶವನ್ನು ಹಮ್ಮಿಕೊಳ್ಳಲಾಗಿದೆ. ವಧು-ವರರು ತಮ್ಮ ವೈಯಕ್ತಿಕ ವಿವರಗಳನ್ನು ಅಂಚೆ ವಿಳಾಸ ಶ್ರೀ ವೀರಭದ್ರೇಶ್ವರ ವಿಕಲಚೇತನರ ಗ್ರಾಮೀಣಾಭಿವೃದ್ಧಿ ಹಾಗೂ ಶಿಕ್ಷಣ ಸಂಸ್ಥೆ (ರಿ) ಚನ್ನಮ್ಮ ಸರ್ಕಲ್ ಹತ್ತಿರ, ಅಮರೇಶ್ವರ ಮೆಡಿಕಲ್ ಸ್ಟೋರ್ ಹಿಂದುಗಡೆ, ಮುಧೋಳ ರಸ್ತೆ, ಯಲಬುರ್ಗಾ ▯ 583236 ತಾ, ಜಿ, ಕೊಪ್ಪಳ ಇಲ್ಲಿಗೆ ಕಳುಹಿಸಬೇಕಾಗುತ್ತದೆ. ಹೆಚ್ಚಿನ ಮಾಹಿತಿಗಾಗಿ ದೂ. ಸಂ: 9611282394ಗೆ ಸಂಪರ್ಕಿಸಬಹುದೆಂದು ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣಾಧಿಕಾರಿ ಡಾ. ಕೆ.ಕೆ. ಪ್ರಕಾಶ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಗಾಂಧೀ ಜಯಂತಿ

ದಾವಣಗೆರೆ: ಸೋಮವಾರ ಜಿಲ್ಲಾ ಗೃಹ ರಕ್ಷಕ ದಳ ಕಚೇರಿಯಲ್ಲಿ ಮಹಾತ್ಮ ಗಾಂಧೀ ಜಯಂತಿ ಮತ್ತು ಲಾಲ್ ಬಹದ್ದೂರ್ ಶಾಸ್ತ್ರಿ ರವರ ಜಯಂತಿಯನ್ನು ಆಚರಿಸಲಾಯಿತು. ಜಿಲ್ಲಾ ಗೃಹರಕ್ಷಕ ದಳದ ಕಮಾಂಡೆಂಟ್ ಡಾ, ಸುಜಿತ್ ಕುಮಾರ್ ಎಸ್,ಹೆಚ್ ಮತ್ತು ನಗರ ಘಟಕದ ಘಟಕಾಧಿಕಾರಿ ಕೆ,ಎಸ್ ಅಮರೇಶ್ ಹಾಗೂ ಅಧಿಕಾರಿಗಳಾದ ಯಲ್ಲಪ್ಪ, ಎ.ವಿ ಮಂಜುನಾಥ್, ಅಂಜಿನಪ್ಪ, ಹಾಗೂ ಜಿಲ್ಲಾ ಗೃಹರಕ್ಷಕ ದಳ ಸದಸ್ಯರು ಉಪಸ್ಥಿತರಿದ್ದರು.

### ಉದ್ಯಮಶೀಲತಾಭಿವೃದ್ಧಿ ತರಬೇತಿ ಶಿಬಿರ

ದಾವಣಗೆರೆ: ನಗರದ ದೇವರಾಜ ಅರಸು ಬಡಾವಣೆಯಲ್ಲಿರುವ ಸ್ಫೂರ್ತಿ ಸಾಮಾಜಿಕ ಶೈಕ್ಷಣಿಕ ಅಭಿವೃದ್ಧಿ ಸಂಸ್ಥೆಯಲ್ಲಿ ಎಸ್.ಎಸ್.ಎಲ್.ಸಿ ತೇರ್ಗಡೆ ಹೊಂದಿದ ಪರಿಶಿಷ್ಟ ಜಾತಿಯ ಉದ್ಯೋಯೋಗಾಕಾಂಕ್ಷಿಗಳಿಗೆ ಅಕ್ಟೋಬರ್ 6 ರಿಂದ15ರವರೆಗೆಉದ್ಯಮಶೀಲತಾಭಿವೃದ್ಧಿತರಬೇತಿ ಶಿಬಿರವನ್ನು ಆಯೋಜಿಸಲಾಗಿದೆ. ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ ಬೆಂಗಳೂರು ಕರ್ನಾಟಕ ಉದ್ಯಶೀಲತಾಭಿವೃದ್ಧಿ ಕೇಂದ್ರ (ಸಿಡಾಕ್) ಧಾರವಾಡ, ಹಾಗೂ ಸ್ಫೂರ್ತಿ ಸಾಮಾಜಿಕ ಮತ್ತು ಶೈಕ್ಷಣಿಕ ಅಭಿವೃದ್ಧಿ ಸಂಸ್ಥೆ ಇವರ ಸಂಯುಕ್ತಾಶ್ರಯದಲ್ಲಿ ಈ ತರಬೇತಿ ಶಿಬಿರವನ್ನು ಆಯೋಜಿಸಲಾಗಿದ್ದು, ಶಿಬಿರದಲ್ಲಿ ಭಾಗವಹಿಸುವ ಅಭ್ಯರ್ಥಿಗಳು 18 ರಿಂದ 55 ವರ್ಷ ವಯೋಮಾನದವರಾಗಿರಬೇಕು. ಅಭ್ಯರ್ಥಿಗಳು 2 ಪಾಸ್‌ಪೋರ್ಟ್ ಅಳತೆಯ ಫೋಟೋ ಹಾಗೂ ಆಧಾರ್ ಕಾರ್ಡ್‌ನ ಪ್ರತಿಯೊಂದಿಗೆ, ಜಂಟಿ ನಿರ್ದೇಶಕರ ಕಛೇರಿ, ಸಿಡಾಕ್, ಪ್ಲಾಟ್ ನಂ: 76ಎ-(ಪಿ1), ಕರೂರು ಕೈಗಾರಿಕಾ ಪ್ರದೇಶ, ಪಿ.ಬಿ. ರಸ್ತೆ, ದಾವಣಗೆರೆ. ತರಬೇತಿದಾರರಾದ ವಿನಯ ಜಿ.ಕೆ. ಮೊ.ಸಂ: 9886115200 ಹಾಗೂ ಬಸವರಾಜ ಜಿ. ಬಿ. ಮೊ.ಸಂ: 9164742033 ಸಂಪರ್ಕಿಸಲು ಸಿಡಾಕ್‌ನ ಜಿಲ್ಲಾ ಜಂಟಿ ನಿರ್ದೇಶಕರು ಆರ್.ಪಿ. ಪಾಟೀಲ್ ತಿಳಿಸಿದ್ದಾರೆ.

### ಕರ್ನಾಟಕ ಡಿ.ಎಸ್.ಟಿ. ಪಿ.ಹೆಚ್.ಡಿ ಶಿಷ್ಯವೇತನಕ್ಕೆ ಅರ್ಜಿ ಆಹ್ವಾನ

ದಾವಣಗೆರೆ: ಕರ್ನಾಟಕ ಸರ್ಕಾರದ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯು(ಡಿ.ಎಸ್.ಟಿ) ವಿಜ್ಞಾನ ಮತ್ತು ಇಂಜಿನಿಯರಿಂಗ್ ವಿಷಯಗಳಲ್ಲಿ ಪಿ.ಹೆಚ್.ಡಿ ಸಂಶೋಧಗೆ ಕರ್ನಾಟಕ ಡಿ.ಎಸ್.ಟಿ.-ಪಿ.ಹೆಚ್.ಡಿ ಶಿಷ್ಯವೇತನ ಎಂಬ ಕಾರ್ಯಕ್ರಮವನ್ನು ಇಲಾಖೆಯ ಸ್ವಾಯತ್ತ ಸಂಸ್ಥೆಯಾದ ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಪ್ರೋತ್ಸಾಹ ಸೊಸೈಟಿಯ ಮುಖಾಂತರ ಅನುಷ್ಠಾನಗೊಳಿಸಲಾಗುತ್ತಿದೆ. ಪ್ರಸಕ್ತ ಸಾಲಿನಲ್ಲಿ ಈ ಯೋಜನೆಯಡಿ ಶಿಷ್ಯವೇತನ ಪಡೆಯಲು ವಿಜ್ಞಾನ ಮತ್ತು ಇಂಜಿನಿಯರಿಂಗ್ ವಿಷಯಗಳಲ್ಲಿ ಕರ್ನಾಟಕದ ಮಾನ್ಯತೆ ಪಡೆದ ವಿಶ್ವವಿದ್ಯಾಲಯ ಸಂಸ್ಥೆ ಹಾಗೂ ಕಾಲೇಜುಗಳಲ್ಲಿ ಪಿ.ಹೆಚ್.ಡಿ ಪದವಿಗೆ ನೋಂದಾಯಿತರಾಗಿರಬೇಕು. ಅರ್ಹ ಸಂಶೋಧನಾ ವಿದ್ಯಾರ್ಥಿಗಳು ಅಗತ್ಯ ದಾಖಲೆಗಳೊಂದಿಗೆ ಭರ್ತಿ ಮಾಡಿದ ಅರ್ಜಿಯನ್ನು ಅಕ್ಟೋಬರ್ 30 ರ ಸಂಜೆ 5 ಗಂಟೆಯೊಳಗಾಗಿ ಸಲ್ಲಿಸಬೇಕು ಎಂದು ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಪ್ರೋತ್ಸಾಹ ಸೊಸೈಟಿಯ ವ್ಯವಸ್ಥಾಪಕ ನಿರ್ದೇಶಕರಾದ ಬಸವರಾಜ ತಿಳಿಸಿದ್ದಾರೆ.

### ನಮ್ಮ ಕ್ಲಿನಿಕ್ ಸಮಯ ಬದಲಾವಣೆ

ದಾವಣಗೆರೆ: ನಗರದ ಅವರಗೆರೆ ಗ್ರಾಮದಲ್ಲಿ ಕಾರ್ಯನಿರ್ವಹಿಸುತ್ತಿರುವ ನಮ್ಮ ಕ್ಲಿನಿಕ್ ಸಮಯವನ್ನು ಬೆಳಗ್ಗೆ 8 ರಿಂದ ಮಧ್ಯಾಹ್ನ 12 ಗಂಟೆಯವರೆಗೆ ಹಾಗೂ ಸಂಜೆ 4 ರಿಂದ 8 ಗಂಟೆಯವರೆಗೆ ಕಾರ್ಯನಿರ್ವಹಿಸಲಿದ್ದು, ಬದಲಾದ ಸಮಯದಲ್ಲಿ ಸಾರ್ವಜನಿಕರು ಸೇವೆ ಪಡೆಯಬಹುದಾಗಿದೆ.

**ಅಂಬೇಡ್ಕರ್‌ರವರ ಸಾಮಾಜಿಕ ನ್ಯಾಯದ ಕನಸು ನನಸು ಮಾಡುವ ಸಾಮರ್ಥ್ಯ ಕಾಂಗ್ರೆಸ್ ಪಕ್ಷಕ್ಕೆ ಇದೆ: ಶಾಸಕ ರಘುಮೂರ್ತಿ**

# ಪಕ್ಷಕ್ಕೆ ಮುಜುಗರ ತರುವ ಕೆಲಸ ಸಹಿಸಲ್ಲ

» **ಚಳ್ಳಕೆರೆ**

ಸಂವಿಧಾನ ಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರ್‌ರವರ ಸಾಮಾಜಿಕ ನ್ಯಾಯದ ಪರಿಕಲ್ಪನೆಗೆ ಜೀವತುಂಬಿ ಸಮಾಜದ ಎಲ್ಲಾ ವರ್ಗಗಳಿಗೂ ಸಮಾನತೆಯ ಸೌಲಭ್ಯವನ್ನು ಕಲ್ಪಿಸಿದ ಏಕೈಕ ರಾಷ್ಟ್ರೀಯ ಪಕ್ಷ ಅದು ರಾಷ್ಟ್ರೀಯ ಕಾಂಗ್ರೆಸ್ ಪಕ್ಷ ಎಂದು ಶಾಸಕ ಟಿ.ರಘುಮೂರ್ತಿ ತಿಳಿಸಿದರು.

ಅವರು, ನಗರದ ಗುರುರಾಘವೇಂದ್ರ ಕಲ್ಯಾಣ ಮಂಟಪದಲ್ಲಿ ಕರ್ನಾಟಕ ರಾಜ್ಯ ಮಾದಿಗ ಯುವ ಸೇನೆ ಹಾಗೂ ಮಾದಿಗ ದಂಡೋರ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಂಡಿದ್ದ ತಾಲ್ಲೂಕಿನ ಗ್ರಾಮ ಪಂಚಾಯಿತಿ ಅಧ್ಯಕ್ಷ, ಉಪಾಧ್ಯಕ್ಷ, ಸದಸ್ಯರು, ನಗರಸಭೆ ಸದಸ್ಯರು ಹಾಗೂ ಜಿಲ್ಲೆಯ ನೂತನ ಶಾಸಕ, ಸಚಿವರಿಗೆ ಹಮ್ಮಿಕೊಂಡಿದ್ದ ಅಭಿನಂದನಾ ಸಮಾರಂಭವನ್ನು ಜ್ಯೋತಿ ಬೆಳಗಿಸುವ ಮೂಲಕ ಉದ್ಘಾಟಿಸಿ ಮಾತನಾಡಿದರು.

ಕಳೆದನೂರಾರುವರ್ಷಗಳಿಂದಶೋಷಿತ ದಲಿತ ಸಮುದಾಯವೂ ಸೇರಿದಂತೆ ನಾಡಿನ ಎಲ್ಲಾ ಸಮುದಾಯಗಳಿಗೆ ಸರ್ಕಾರದ ಸವಲತ್ತುಗಳನ್ನು ಪಡೆದುಕೊಳ್ಳುವಂತೆ ಮಾಡಿದ್ದು ಕಾಂಗ್ರೆಸ್ ಪಕ್ಷ. ದೇಶದ ಭದ್ರತೆ ಹಾಗೂ ಆಂತರಿಕ ಸಮಸ್ಯೆಗಳನ್ನು ನಿವಾರಿಸುವಲ್ಲಿ ಕಾಂಗ್ರೆಸ್ ಪಕ್ಷ ಸದಾ ಮುಂದೆ ಸಮಾಜದಲ್ಲಿ ಆಳವಾಗಿ ಬೇರೂರಿದ್ದ ಬಡತನ ನಿರ್ಮೂಲನೆ, ಶೋಷಿತ ಸಮುದಾಯಕ್ಕೆ ಕಾಯಕಲ್ಪ ಮುಂತಾದ ಕಾರ್ಯಕ್ರಮಗಳು ಕಾಂಗ್ರೆಸ್ ಪಕ್ಷದ ಗೌರವ, ವರ್ಚಸ್ ಹಾಗೂ ಮೌಲ್ಯವನ್ನು ಹೆಚ್ಚಿಸಿದೆ. ಇಂತಹ ಉತ್ತಮ ಸಂಘಟನೆ ಹೊಂದಿರುವ ಪಕ್ಷ ಗೌರವಕ್ಕೆ ದಕ್ಕೆ ತರುವಂತಹ ಕೆಲಸವನ್ನು ಯಾರೂ ಮಾಡಬಾರದು. ಪ್ರತಿಯೊಬ್ಬ ಕಾರ್ಯಕರ್ತ ಹಾಗೂ ಮುಖಂಡರು ಪಕ್ಷದ ಮೌಲ್ಯವನ್ನು ಹೆಚ್ಚಿಸುವ ಕಾರ್ಯದಲ್ಲಿ ಸ್ವಯಂ ಪ್ರೇರಣೆಯಿಂದ ಕಾರ್ಯನಿರ್ವಹಿಸಬೇಕು ಎಂದರು.



ಚಿತ್ರದುರ್ಗ ಲೋಕಸಭಾ ಕ್ಷೇತ್ರಕ್ಕೆ ಸ್ಥಳೀಯ ಅಭ್ಯರ್ಥಿ ಆಯ್ಕೆ ಬಗ್ಗೆ ಸೂಕ್ತ ಸಮಯದಲ್ಲಿ ಪಕ್ಷದ ಹೈಕಮಾಂಡ್ ಗಟ್ಟಿಯಾದ ನಿರ್ಧಾರವನ್ನು ಕೈಗೊಳ್ಳಲಿದೆ. ನಾವೆಲ್ಲರೂಪಕ್ಷಸೂಚನೆಗಳನ್ನುಪಾಲಿಸುವ ಕಾರ್ಯಕರ್ತರಾಗಿ ಮುನ್ನಡೆಯಬೇಕು. ಪಕ್ಷಕ್ಕೆ ಯಾವುದೇ ಹಂತದಲ್ಲಿ ಮುಖಭಂಗವಾಗುವಂತಹ ಕೆಲಸವನ್ನು ಮಾಡುವುದು ಸರಿಯಲ್ಲವೆಂದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಜಿಲ್ಲಾ ಕಾಂಗ್ರೆಸ್ ಪಕ್ಷದ ಕಾರ್ಯದರ್ಶಿ ಚೌಳೂರು ಪ್ರಕಾಶ್, ಜಿಲ್ಲೆಯ 15 ವರ್ಷಗಳ ಇತಿಹಾಸವನ್ನು ಅವಲೋಕಿಸಿದಾಗ ಯಾವುದೇ ಸ್ಥಳೀಯ ಅಭ್ಯರ್ಥಿಗೆ ಪಕ್ಷ ಲೋಕಸಭೆ ಚುನಾವಣೆಗೆ ನಿಲ್ಲಲು ಅವಕಾಶ ಮಾಡಿಕೊಟ್ಟಿಲ್ಲ. ಬೇರೆ ಕ್ಷೇತ್ರದಿಂದ ವಲಸೆ ಬಂದ ನಾಯಕರನ್ನು ಗೆಲ್ಲಿಸುವ ಕೆಲಸವನ್ನು ನಾವು ಮಾಡಿದ್ದೇವೆ. ನಮ್ಮಲ್ಲಿಯೇ ಸಮರ್ಥ ಅಭ್ಯರ್ಥಿ ಇರಬೇಕಾದರೆ ಬೇರೆ ಅಭ್ಯರ್ಥಿಯನ್ನು ತಂದು ಗೆಲ್ಲಿಸುವ ಕೆಲಸ ಪಕ್ಷದ ಕಾರ್ಯಕರ್ತರಿಗೆ ಮುಖಂಡರಿಗೆ ಮುಜುಗರ ಉಂಟು ಮಾಡಿದೆ. ಈ ನಿಟ್ಟಿನಲ್ಲಿ ಪಕ್ಷ ಸ್ಥಳೀಯ ಅಭ್ಯರ್ಥಿ ಆಯ್ಕೆಗೆ ಮುಂದಾಗಬೇಕು ಎಂದರು.

ಗ್ರಾಮ ಪಂಚಾಯಿತಿ ಅಧ್ಯಕ್ಷ ಆನಂದಕುಮಾರ್ ಮಾತನಾಡಿ, ಪ್ರತಿಯೊಂದು ಹಂತದಲ್ಲೂ ಸ್ಥಳೀಯರನ್ನು ಬಯಸುವ ಸಂದರ್ಭದಲ್ಲಿ ಪಕ್ಷ ಅನಗತ್ಯವಾಗಿ ಬೇರೆಯವರಿಗೆ ಅವಕಾಶ ಮಾಡಿಕೊಡುವ ಮೂಲಕ ನಮ್ಮನ್ನು ಮೂಲೆಗುಂಪು ಮಾಡುತ್ತಿದೆ ಎಂದು ಅಸಮದಾನ ವ್ಯಕ್ತಪಡಿಸಿದರು.

ಲಿಡ್ಕರ್ ಮಾಜಿ ಅಧ್ಯಕ್ಷ ಶಂಕರ ಮಾತನಾಡಿ, ಇನ್ನೂ ಕೇವಲ ಆರು ತಿಂಗಳಲ್ಲಿ ಲೋಕಸಭೆ ಚುನಾವಣೆ ಎದುರಾಗಲಿದೆ. ಆದರೆ, ಸಮುದಾಯ ಮುಖಂಡರು ಸ್ಥಳೀಯ ಅಭ್ಯರ್ಥಿಯ ಆಯ್ಕೆ ಬಗ್ಗೆ ಹೆಚ್ಚು ಉತ್ಸಾಹ ತೋರಿದ್ದಾರೆ. ಕಾಂಗ್ರೆಸ್ ಪಕ್ಷ ಹೈಕಮಾಂಡ್ ಸ್ಥಳೀಯರ ವಾದಕ್ಕೆ ಮನ್ನಣೆ ನೀಡಬೇಕು. ಪ್ರಸ್ತುತ 2009ರ ಲೋಕಸಭಾ ಕ್ಷೇತ್ರದ ಅಭ್ಯರ್ಥಿಯಾಗಿ ಡಾ.ಜೆ.ಜೆ.ಹಟ್ಟಿ ತಿಪ್ಪೇಸ್ವಾಮಿ ಸಮರ್ಥರಾಗಿದ್ದು, ಅವರಿಗೆ ಮತ್ತೊಮ್ಮೆ ಅವಕಾಶ ನೀಡಬೇಕು ಎಂದರು.

ಕಾರ್ಯಕ್ರಮದ ದಿಕ್ಸೂಚಿ ಭಾಷಣ ಮಾಡಿದ ಡಾ.ಜೆ.ಜೆ.ಹಟ್ಟಿ ತಿಪ್ಪೇಸ್ವಾಮಿ, ಮಾದಿಗ ಸಮುದಾಯದಲ್ಲಿ ಎಡ ಮತ್ತು ಬಲ ಎರಡೂ ಪಂಗಡಗಳಿದ್ದು, ಎಡಪಂಗಡದ ಮತಗಳು ಸುಮಾರು 4.50 ಲಕ್ಷಗಳಿವೆ. ಆದರೆ, ಕೇವಲ ಎರಡು ಲಕ್ಷ ಇರುವ ಬಲಪಂಗಡದ ಆಯ್ಕೆ ಸಮಂಜಸವಲ್ಲ. ಆದರೆ, ನಮ್ಮ ಸಮುದಾಯದಲ್ಲಿ ಈ ಬಗ್ಗೆ ಪ್ರಶ್ನೆ ಮಾಡುವವರಿಲ್ಲ. ಜನಾಂಗವನ್ನು ತಪ್ಪುದಾರಿಗೆ ಎಳೆಯುವಂತಹ ಅನೇಕ ಮುಖಂಡರುನಮ್ಮಮಧ್ಯೆಇದ್ದು,ಜನಾಂಗಕ್ಕೆ ತಪ್ಪು ಸಂದೇಶವನ್ನು ನೀಡುತ್ತಿದ್ದಾರೆ. ಕಾಂಗ್ರೆಸ್ ಪಕ್ಷದ ಗೌರವ, ಘನತೆ, ಖ್ಯಾತಿ ಇನ್ನೂ ಎತ್ತರಕ್ಕೆ ಏರಬೇಕಾದರೆ ಪಕ್ಷ ಸ್ಥಳೀಯ ಅಭ್ಯರ್ಥಿಗೆ ಸ್ಪರ್ಧಿಸಲು ಅವಕಾಶ ಮಾಡಿಕೊಡಬೇಕು. ಪಕ್ಷವನ್ನು ಗೆಲ್ಲಿಸಲು ಈಗಾಗಲೇ ಸಮುದಾಯ ಲಕ್ಷಾಂತರ ಜನ ಕಾರ್ಯಕರ್ತರು ನನ್ನ ಜೊತೆಗಿದ್ದು, ಸಿದ್ದತೆಗಳನ್ನು ನಡೆಸುತ್ತಿದ್ದಾರೆ. ನಮಗೆ ಕಾಂಗ್ರೆಸ್ ಪಕ್ಷ ಮತ್ತೊಮ್ಮೆ ಈ ಸ್ಥಾನದಲ್ಲಿ ಗೆಲುವು ಸಾಧಿಸಬೇಕು. ಸಮುದಾಯವನ್ನು ಒಡೆದು, ತುಳಿದು ಶೋಷಿಸುವ ಮುಖಂಡರ ವಿರುದ್ದ ಜನಾಂಗ ಎಚ್ಚರವಾಗಿರಬೇಕು ಎಂದರು.

ಕಾರ್ಯಕ್ರಮದಲ್ಲಿ ಮಾದಿಗ ದಂಡೋರ ಜಿಲ್ಲಾಧ್ಯಕ್ಷ ದ್ಯಾವರನಹಳ್ಳಿ ತಿಪ್ಪೇಸ್ವಾಮಿ, ಮಾದಿಗ ಯುವ ಸೇನೆ ಜಿಲ್ಲಾಧ್ಯಕ್ಷ ರಾಜಣ್ಣ, ಟಿಎಟಿ ಪ್ರಭುದೇವ್, ಪರಶುರಾಮಪುರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಶಶಿಧರ, ಡಿವೈಎಸ್ಪಿ ರಾಜಣ್ಣ, ಬಿ.ವಿ.ಸಿರಿಯಣ್ಣ, ಸಮುದಾಯ ವಿವಿಧ ಸಂಘಟನೆಗಳ ಪದಾಧಿಕಾರಿಗಳು ವೇದಿಕೆಯಲ್ಲಿ ಉಪಸ್ಥಿತರಿದ್ದರು.

# ಕುಡಿತ ಮುಕ್ತ ಸಮಾಜ ನಿರ್ಮಾಣಕ್ಕೆ ಎಲ್ಲರೂ ಕೈಜೋಡಿಸಬೇಕು: ಕೆ.ಸತೀಶ್‌ನಾಯ್ಕ

» **ಚಳ್ಳಕೆರೆ**

ಕುಡಿತದಿಂದ ಹಲವಾರು ಸಂಸಾರಗಳು ನೆಮ್ಮದಿ ಕಳೆದುಕೊಂಡಿವೆ. ಕುಡಿತ ನಮ್ಮನ್ನು ಮತ್ತು ನಮ್ಮ ಬದುಕನ್ನು ನಾಶಪಡಿಸುತ್ತಿದ್ದು, ನಾವೆಲ್ಲರೂ ಕುಡಿತದಚಟದಿಂದ ಮುಕ್ತರಾಗಬೇಕೆಂದು ಪಿಎಸ್‌ಐ ಕೆ.ಸತೀಶ್‌ನಾಯ್ಕ ತಿಳಿಸಿದರು.

ಅವರು, ಜೈನಭವನದಲ್ಲಿ ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ದಿ ಯೋಜನೆ, ಅಖಿಲ ಕರ್ನಾಟಕ ಜನಜಾಗೃತಿ ವೇದಿಕೆ, ಜಿಲ್ಲಾ ಜನಜಾಗೃತಿ ವೇದಿಕೆ, ರಾಜ್ಯಮಧ್ಯಪಾನ ಸಂಯಮಮಂಡಳಿ, ನಗರಸಭೆ, ಸಾರ್ವಜನಿಕ ಆಸ್ಪತ್ರೆ ಇನ್ನಿತರ ಪ್ರಗತಿಪರ ಸಂಘಟನೆಗಳು ಹಮ್ಮಿಕೊಂಡಿದ್ದ 1736ನೇ ಮದ್ಯ ವರ್ಜನ ಶಿಬಿರವನ್ನು ಜ್ಯೋತಿ ಬೆಳಗಿಸುವ ಮೂಲಕ ಉದ್ಘಾಟಿಸಿ ಮಾತನಾಡಿದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಜಿಲ್ಲಾ ನಿರ್ದೇಶಕ ವಿನಯ್‌ಕುಮಾರ್ ಸುವರ್ಣ, ರಾಜ್ಯದ ಬಹುತೇಕ ಮಧ್ಯಮ ಮತ್ತು ಬಡ ಕುಟುಂಬಗಳಿಗೆ ಕುಡಿತದ ಚಟದಿಂದ ಬದುಕಿನ ಅಸ್ಥಿರತೆಯನ್ನು ಎದುರಿಸುತ್ತಾ ಬಂದಿವೆ.

ಕುಡಿತ ಒಬ್ಬ ವ್ಯಕ್ತಿಯನ್ನು ವಿನಾಶದತ್ತ ತೆಗೆದುಕೊಂಡು ಹೋಗುವುದಲ್ಲದೆ, ಅವನ ಇಡೀ ಕುಟುಂಬವನ್ನು ಬೀದಿಗೆ ತಳ್ಳುತ್ತದೆ. ಕುಡಿತದ ಚಟ ವಿನಾಶಕ್ಕೆ ದಾರಿ ಎಂಬ ಅಂಶವನ್ನು ಮರೆತು ಕುಡಿತದಿಂದಲೇ ಸರ್ವಸ್ವ ಎನ್ನುವ ವ್ಯಕ್ತಿಗಳು ನಮ್ಮ ಮಧ್ಯದಲ್ಲಿ ಇದ್ದಾರೆ. ಆದರೆ, ಇವರನ್ನು ಈ ಚಟದಿಂದ ಬದಲಾಯಿಸಿ ಉತ್ತಮ ನಾಗರೀಕನಾಗಿ ಪರಿವರ್ತಿಸುವ ಹೊಣೆ ಎಲ್ಲರ ಮೇಲಿದೆ ಎಂದರು.



ಕಾರ್ಯಕ್ರಮದಅಧ್ಯಕ್ಷತೆವಹಿಸಿದ್ದಗೌರವಾಧ್ಯಕ್ಷ ಸಾಲ್ವೆಂಟ್ ಪ್ರಕಾಶ್ ಮಾತನಾಡಿ, ಶ್ರೀಕ್ಷೇತ್ರ ಧರ್ಮಸ್ಥಳ ಕಳೆದ ಸುಮಾರು 40 ವರ್ಷಗಳಿಂದ ಪ್ರತಿವರ್ಷ ಈ ಕಾರ್ಯಕ್ರಮ ಆಯೋಜಿಸುವ ಮೂಲಕ ಸಾವಿರಾರು ಕುಟುಂಬಗಳಿಗೆ ಕುಡಿತದ ಚಟದಿಂದ ಮುಕ್ತಿ ನೀಡಿದೆ. ಈ ಪರಂಪರೆ ಇನ್ನೂ ಮುಂದುವರೆಯಲಿದ್ದು ಇದಕ್ಕೆ ಎಲ್ಲರ ಸಹಕಾರ ಅತಿಮುಖ್ಯವೆಂದರು.

ಕಾರ್ಯಕ್ರಮದಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿ ಕೆ.ಎಸ್.ಸುರೇಶ್, ನಿಕಟಪೂರ್ವ ಜಿಲ್ಲಾ ಜನಜಾಗೃತಿ ವೇದಿಕೆ ಅಧ್ಯಕ್ಷ ಬಿ.ಸಿ.ಸಂಜೀವಮೂರ್ತಿ, ಸದಸ್ಯರಾದ ಯು. ಎಸ್.ವಿಷ್ಣುಮೂರ್ತಿರಾವ್, ವಾಣಿಜ್ಯೋದ್ಯಮಿ ಕಿಶೋರ್‌ಶೆಟ್ಟಿ, ನೇತಾಜಿ ಪ್ರಸನ್ನ, ಬಿ.ಪರೀದ್‌ಖಾನ್, ನಗರಸಭೆ ಆರೋಗ್ಯ ನಿರೀಕ್ಷಿ ಗೀತಾಕುಮಾರಿ, ವಕೀಲೆ ಜಯಲಕ್ಷ್ಮಿ, ತಾಲ್ಲೂಕು ಯೋಜನಾಧಿಕಾರಿ ಶಶಿಕಲಾ, ಅಧ್ಯಕ್ಷ ಆರ್. ದೊಡ್ಡರಂಗಪ್ಪ, ಬಿ.ಪಾಟೀಲ್, ಅಶೋಕ್, ಗ್ರಾಮ ಪಂಚಾಯಿತಿ ಸದಸ್ಯ ಅಂಗಡಿರಮೇಶ್, ಛಾಯಾಗ್ರಾಹಕರ ಸಂಘದ ನಿರ್ದೇಶಕ ಓಬಣ್ಣ ಮುಂತಾದವರು ಉಪಸ್ಥಿತರಿದ್ದರು.



**ಚಳ್ಳಕೆರೆ ಗಾಂಧಿನಗರದ ಶತಾಯುಷಿ ಕಲ್ಲಪ್ಪ ಮತ್ತು ಮೆಹಬೂಬಿಯವರನ್ನು ತಾಲ್ಲೂಕು ಸ್ವೀಫ್ ಸಮಿತಿವತಿಯಿಂದ ಸನ್ಮಾನಿಸಲಾಯಿತು.**

### ಅವಧಿ ವಿಸ್ತರಣೆ

ದಾವಣಗೆರೆ: ಪ್ರಸಕ್ತ ಸಾಲಿನಲ್ಲಿ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಇಲಾಖೆ ವತಿಯಿಂದ ವಿಕಲಚೇತನ ಫಲಾನುಭವಿಗಳಿಗೆ 8 ಯೋಜನೆಗಳನ್ನು ಡಿ.ಬಿ.ಟಿ.ಗೆ ಒಳಪಡಿಸಿ ಸೇವಾಸಿಂಧು ಪೋರ್ಟಲ್‌ನಲ್ಲಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

## ರೋಟರಿ ಕ್ಲಬ್‌ನ ಸಾಮಾಜಿಕ ಕಾರ್ಯಕ್ರಮಗಳಿಗೆ ಮಹಾತ್ಮ ಗಾಂಧೀಜಿ ಸ್ಫೂರ್ತಿ: ಕೆ.ನಾಗೇಶ್




» **ಚಳ್ಳಕೆರೆ**

ರಾಷ್ಟ್ರಪಿತ ಮಹಾತ್ಮಗಾಂಧೀಜಿಯವರು ಅಹಿಂಸಾ ಧರ್ಮದ ಮೂಲಕವೇ ಸ್ವಾತಂತ್ರ್ಯವನ್ನು ಪಡೆಯುವ ಮೂಲಕ ಇಂದು ವಿಶ್ವಕ್ಕೆ ಮಾದರಿಯಾಗಿದ್ದಾರೆ. ಅದೇ ರೀತಿ ಲಾಲ್ ಬಹದ್ದೂರ್ ಶಾಸ್ತ್ರಿಯವರೂ ಸಹ ದೇಶದ ಸರ್ವತೋಮುಖ ಅಭಿವೃದ್ದಿಯ ರೂವಾರಿಯಾಗಿದ್ದರು. ಇಂತಹ ಮಹಾನ್ ನಾಯಕರ ಹುಟ್ಟುಹಬ್ಬ ಆಚರಣೆ ಎಲ್ಲರಿಗೂ ಸ್ಫೂರ್ತಿ ಎಂದು ರೋಟರಿ ಕ್ಲಬ್ ಅಧ್ಯಕ್ಷ ಕೆ.ನಾಗೇಶ್ ತಿಳಿಸಿದರು.

ಅವರು, ಮಹಾತ್ಮಗಾಂಧೀಜಿ ಮತ್ತು ಲಾಲ್ ಬಹದ್ದೂರ್ ಶಾಸ್ತ್ರಿ ಹುಟ್ಟುಹಬ್ಬದ ಹಿನ್ನಲೆಯಲ್ಲಿ ಗಾಂಧಿ ಜಯಂತಿ ಆಚರಣೆಯನ್ನು ಹಲವಾರು ಸಾಮಾಜಿಕ ಚಟುವಟಿಕೆಗಳ ಮೂಲಕ ಕೈಗೊಂಡರು. ನಗರದ ಬನಶ್ರೀವೃದ್ದಾಶ್ರಮದಲ್ಲಿ ಇರುವ ವಯೋವೃದ್ದರಿಗೆ ರೋಟರಿ ಕ್ಲಬ್‌ವತಿಯಿಂದ ಉಚಿತವಾಗಿ ಬೆಡ್‌ಶಿಟ್ ವಿತರಿಸಿ ಮಾತನಾಡಿದರಲ್ಲದೆ, ಎಲ್ಲರಿಗೂ ಉಪಹಾರ ಸಿಹಿ ನೀಡಿ ಗಾಂಧೀಜಿಯವರ ಹುಟ್ಟುಹಬ್ಬದ ಶುಭಾಶಯಗಳನ್ನು ವಿನಿಮಯ ಮಾಡಿಕೊಂಡರು. ರೋಟರಿ ಕ್ಲಬ್ ಹಿರಿಯ ಸದಸ್ಯ, ವೈದ್ಯಶ್ರೀಪ್ರಶಸ್ತಿ ವಿಜೇತ ಡಾ.ಕೆ.ಎಂ.ಜಯಕುಮಾರ್ ಮಾತನಾಡಿ, ರೋಟರಿ ಕ್ಲಬ್ ಸಾಮಾಜಿಕ ಚಟುವಟಿಕೆಗಳ ಮೂಲಕ ಜನಸೇವೆ ಮಾಡುವ ಕಾರ್ಯಕ್ರಮವನ್ನು ನಿರಂತರ ಮಾಡುತ್ತಾ ಬಂದಿದೆ. ರೋಟರಿ ಕ್ಲಬ್ ಎಲ್ಲಾ ರಂಗಗಳಲ್ಲೂ ಪ್ರವೇಶಿಸಿ ಸೌಲಭ್ಯಗಳನ್ನು ಪ್ರಾಮಾಣಿಕವಾಗಿ ಒದಗಿಸುವ ಕಾರ್ಯವನ್ನು ಮಾಡುತ್ತಿದೆ ಎಂದರು. ಇದೇ ಸಂದರ್ಭದಲ್ಲಿ ರೋಟರಿ ಕ್ಲಬ್‌ನ ಎಲ್ಲಾ ಪದಾಧಿಕಾರಿಗಳು ಹಿರಿಯ ಸದಸ್ಯ ಎಸ್.ಜಯಪ್ರಕಾಶ್ ನೇತೃತ್ವದಲ್ಲಿ ತಾಲ್ಲೂಕಿನ ಕಾಲುವೇಹಳ್ಳಿ ಗ್ರಾಮಕ್ಕೆ ಭೇಟಿ ನೀಡಿ ಅಂಗವಿಕಲತೆಯನ್ನು ಮೆಟ್ಟಿನಿಂತು ಇತ್ತೀಚೆಗೆ ಇಂಡೋನೇಷಿಯದಲ್ಲಿ ನಡೆದ ಬ್ಯಾಡ್ಮಿಂಟನ್ ಸ್ಪರ್ಧೆಯಲ್ಲಿ ಭಾಗವಹಿಸಿ ಚಾಂಪಿಯನ್‌ಶಿಪ್ ಗಳಿಸಿದ ಪಲ್ಲವಿಯವರನ್ನು ಸನ್ಮಾನಿಸಿದರು.

## ಪ್ರಮುಖ ಸುದ್ದಿ

# ಎಲೆಬೇತೂರು ಶಾಲೆಯಲಿ ಗಾಂದಿ, ಶಾಸ್ತ್ರಿ ಜನ್ಮದಿನಾಚರಣೆ

» **ಎಲೆಬೇತೂರು**

ಶ್ರೀ ಕೊಂಡಜ್ಜಿ ಬಸಪ್ಪ ಪ್ರೌಢಶಾಲೆ ಮತ್ತು ತರಳಬಾಳು ಆಂಗ್ಲ ಮಾಧ್ಯಮ ಪ್ರಾಥಮಿಕ ಮತ್ತು ಪ್ರೌಢಶಾಲೆಗಳ ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ್ದ 154 ನೆಯ ಗಾಂಧೀಜಿ ಮತ್ತು ಲಾಲ್ ಬಹದ್ದೂರ್ ಶಾಸ್ತ್ರಿಗಳ 119 ನೆಯ ಜಯಂತಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಎಂ ಬಸವರಾಜಪ್ಪನವರು ಮಾತನಾಡಿ ನಮ್ಮ ದೇಶದ ಸ್ವಾತಂತ್ರ್ಯಕ್ಕಾಗಿ ಸಾವಿರಾರು ಜನ ತನು-ಮನ-ಧನ ಅರ್ಪಿಸಿದ್ದಾರೆ. ಅವರಲ್ಲಿ ರಾಷ್ಟ್ರಪಿತ ಮಹತ್ಮಾ ಗಾಂಧೀಜಿ ಮತ್ತು ನಮ್ಮ ದೇಶದ ಎರಡನೆಯ ಪ್ರಾಧನಮಂತ್ರಿಗಳಾದ ಲಾಲ್‌ಬಹದ್ದೂರ್ ಶಾಸ್ತ್ರೀಯವರ ಜನ್ಮದಿನ ಇಂದು. ಈ ಎರಡೂ ಚೇತನಗಳು ಸದಾ ಸ್ಮರಣೀಯರು. ಅವರ ಬದುಕು-ಬರಹಗಳು ವಿದ್ಯಾರ್ಥಿಗಳ ವ್ಯಕ್ತಿತ್ವ ರೂಪಿಸುವಲ್ಲಿ ಮಹತ್ವದ ಪಾತ್ರವಹಿಸುವುದರಲ್ಲಿ ಅನುಮಾನವಿಲ್ಲ. ಗಾಂಧೀಜಿ ಉಪ್ಪಿನ ಸತ್ಯಾಗ್ರಹ, ಕ್ವಿಟ್ ಇಂಡಿಯಾ ಚಳುವಳಿ, ಸ್ವದೇಶಿ ಚಳುವಳಿ ಮುಂತಾದವುಗಳ ಮೂಲಕ ರಾಷ್ಟ್ರದ ಜನರನ್ನು ಒಗ್ಗೂಡಿಸಿ ಸ್ವಾತಂತ್ರ್ಯ ತಂದುಕೊಡುವಲ್ಲಿ ಸಫಲರಾದರು. ಲಾಲ್ ಬಹದ್ದೂರ್‌ಶಾಸ್ತ್ರಿಗಳುಪ್ರಧಾನಿಯಾಗಿದ್ದಾಗ ನಾನು ವಿದ್ಯಾರ್ಥಿಯಾಗಿದ್ದೆ. ಈಗಲೂ ನನಗೆ 'ಶಾಸ್ತ್ರೀಜಿ ಸೋಮವಾರ' ನನೆಪಿದೆ. ಪ್ರತಿ ಸೋಮವಾರ ನಾವೆಲ್ಲ ಒಂದು ಹೊತ್ತು ಉಪವಾಸ ಇರುತ್ತಿದ್ದೆವು. ಅಂದು ಹೊಟೆಲ್ಗಳನ್ನು ಸಹ ಬಂದ್ ಮಾಡಿಸುತ್ತಿದ್ದರು. ಶಾಸ್ತ್ರೀಜಿಯವರ ಬದುಕು ಇಂದಿನ ರಾಜಕಾರಣಿಗಳಿಗೆ ಮಾದರಿಯಾದುದು. ಇವರಿಬ್ಬರನ್ನು ಸ್ಮರಿಸಿಕೊಳ್ಳುವುದರ ಮೂಲಕ ವಿದ್ಯಾರ್ಥಿಗಳು ತಮ್ಮ ವ್ಯಕ್ತಿತ್ವ ನಿರ್ಮಾಣ ಮಾಡಿಕೊಳ್ಳಬೇಕು ಎಂದರು.



ಮುಖ್ಯ ಅತಿಥಿಗಳಾಗಿದ್ದ ಪ್ರಾಥಮಿಕ ಶಾಲೆಯ ಸ್ಥಳೀಯ ಸಲಹಾ ಸಮಿತಿಯ ಅಧ್ಯಕ್ಷರಾದ ಹೆಚ್ ಬಸವರಾಜಪ್ಪನವರು ಮಾತನಾಡಿ ಬದುಕಿ ಸತ್ತವರು ಬಹಳ; ಸತ್ತು ಬದುಕಿದವರು ವಿರಳ. ಅಂತಹ ವಿರಳರಲ್ಲಿ ವಿರಳರಾದವರು ಮಹಾತ್ಮ ಗಾಂಧೀಜಿ ಮತ್ತು ಲಾಲ್‌ಬಹದ್ದೂರ್ ಶಾಸ್ತ್ರಿಯವರು. ಇನ್ನೊಬ್ಬರಿಗಾಗಿ, ಸಮಾಜಕ್ಕಾಗಿ, ದೇಶಕ್ಕಾಗಿ ಯಾರು ತ್ಯಾಗ ಮಾಡುತ್ತಾರೋ ಅವರು ಸತ್ತೂ ಬದುಕಿರುತ್ತಾರೆ. ಅಂಥವರಲ್ಲಿ ಎಲೆಬೇತೂರಿನ ಮಾಳಿಗೆರ ಕುರುವೆತ್ತಪ್ಪ ಮತ್ತು ಮಾಗೋಡರ ಹನುಮಂತಪ್ಪ ಮುಖ್ಯರು. ಶ್ರೀಯುತರು ಮಕ್ಕಳ ವಿದ್ಯಾಭ್ಯಾಸದ ಹಿನ್ನೆಲೆಯಲ್ಲಿ ತಮಗೆ ಸೇರಿದ ಬಹುಬೆಲೆ ಬಾಳುವ ಜಮೀನನ್ನು ಶಾಲಾ ಕಟ್ಟಡ ಕಟ್ಟಲು ಕೊಟ್ಟು ಸತ್ತೂ ಬದುಕಿದ್ದಾರೆ. ಇವರು ವಿದ್ಯಾರ್ಥಿಗಳಿಗೆ, ಸಾರ್ವಜನಿಕರಿಗೆ ಪ್ರೇರಣಾದಾಯಕರು. ರಾಜಕಾರಣಿಗಳು ಶಾಸ್ತ್ರೀಜಿಯವರಂತೆ ಇಂದಿನ ರಾಜಕಾರಣಿಗಳು ಹೆಚ್ಚಿನ ಸರಕಾರಿ ಸವಲತ್ತುಗಳನ್ನು ತ್ಯಜಿಸುವ ಸಂಕಲ್ಪ ಮಾಡಬೇಕು. ಆಗ ಅಧಿಕಾರಿಗಳು, ಸಾರ್ವಜನಿಕರು ಅವರನ್ನು ಅನುಸರಿಸಲು ಪ್ರಯತ್ನಿಸುತ್ತಾರೆ. ಗಾಂಧೀಜಿ ಮತ್ತು ಶಾಸ್ತ್ರೀಜಿ ಭ್ರಷ್ಟಾಚಾರ ಮುಕ್ತ ಕನಸು ಕಂಡವರು. ಅವರ ಕನಸು ಕನಸಾಗಿಯೇ ಉಳಿದಿದೆ. ಆ ಕನಸನ್ನು ನನಸು ಮಾಡುವ ಕೆಲಸ ಇಂದಿನ ವಿದ್ಯಾರ್ಥಿಗಳಿಂದ, ಸಾರ್ವಜನಿಕರಿಂದ ನಡೆಯಬೇಕು. ಆಗ ಜೀವನ ಸಾರ್ಥಕವಾಗುವುದು ಎಂದರು.

ಮುಖ್ಯ ಅತಿಥಿಗಳಾದ ಮರುಳಸಿದ್ದಪ್ಪ ಜೀವನದಲ್ಲಿ ಬದಲಾವಣೆಯಾಗಲು ಈ ಇಬ್ಬರ ವ್ಯಕ್ತಿತ್ವ ರೂಢಿಸಿಕೊಳ್ಳಬೇಕು. ಸತ್ಯಹರಿಶ್ಚಂದ್ರ ನಾಟಕ ಗಾಂಧಿಯ ಬದುಕಿಗೆ ಬದಲಾವಣೆ ತಂದಿತು. ಸತ್ಯ ಪರಮನಿಷ್ಟವಾದುದು. ಸತ್ಯದ ಹಾದಿ ಎಂದೂ ಕಠಿಣ. ಆದರೆ ಅದರ ಫಲ ಮಾತ್ರ ಮಧುರವಾದುದು. ಗಾಂಧೀಜಿಯಂತೆ ತಪ್ಪುಗಳನ್ನು ತಿದ್ದಿಕೊಳ್ಳುವ ಪ್ರಾಮಾಣಿಕತೆಯನ್ನು ರೂಢಿಸಿಕೊಳ್ಳಬೇಕು. ಅವರು ಶಾಂತಿಯಿಂದ ಸ್ವಾತಂತ್ರ್ಯ ತಂದುಕೊಟ್ಟಮಾರ್ಗ ವಿನೂತನವಾದುದು.

## ಫಾಸ್ಟ್ ನ್ಯೂಸ್

### ಡಿಎಂಎಫ್ ನಿಧಿಯಡಿ 115 ಕೋಟಿ ರೂ. ಸಂಗ್ರಹ

» ಮೊದಲ ಪುಟದಿಂದ

ಇದಕ್ಕೆ ಪ್ರತಿಕ್ರಿಯಿಸಿದ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಕಾರ್ಯಪಾಲಕ ಅಭಿಯಂತರ ಬಸವನಗೌಡ ಪಾಟೀಲ್ ಅವರು, ಇನ್ನು 20 ದಿನಗಳ ಒಳಗಾಗಿ ಎಲ್ಲ ಆರ್.ಓ ಘಟಕಗಳ ನಿರ್ಮಾಣ ಕಾರ್ಯ ಪೂರ್ಣಗೊಳಿಸಲಾಗುವುದು ಎಂದರು.ನಿರ್ಮಿತಿ ಕೇಂದ್ರದಿಂದ ಕೈಗೊಳ್ಳಲಾಗುತ್ತಿರುವ ಎಲ್ಲ ಕಾಮಗಾರಿಗಳು ಹಾಗೂ ಪ್ರಸ್ತುತ ಸ್ಥಿತಿಗತಿ ಕುರಿತು ನಿರ್ಮಿತಿ ಕೇಂದ್ರದ ಯೋಜನಾ ನಿರ್ದೇಶಕರು, ಖುದ್ದು ಸ್ಥಳಕ್ಕೆ ಭೇಟಿ ನೀಡಿ, ಆರ್ಥಿಕ ಹಾಗೂ ಭೌತಿಕ ಸಾಧನೆ ಕುರಿತಂತೆ ಒಂದು ತಿಂಗಳ ಒಳಗಾಗಿ ವರದಿ ಸಿದ್ಧಪಡಿಸಬೇಕು, ಹಾಗೂ ವರದಿಯೊಂದಿಗೆ ಆಯಾ ಕ್ಷೇತ್ರದ ಶಾಸಕರನ್ನು ಸಂಪರ್ಕಿಸಿ, ಕಾಮಗಾರಿಗಳನ್ನು ತ್ವರಿತವಾಗಿ ಪೂರ್ಣಗೊಳಿಸುವುದಕ್ಕೆ ಸಂಬಂಧಿಸಿದಂತೆ ಅಗತ್ಯವಿರುವ ಅನುದಾನ, ಸಮಸ್ಯೆಗಳ ಬಗ್ಗೆ ಚರ್ಚಿಸಿ, ವಿವರವನ್ನು ಜಿಲ್ಲಾಧಿಕಾರಿಗಳಿಗೆ ಸಲ್ಲಿಸುವಂತೆ ಜಿಲ್ಲಾ ಉಸ್ತುವಾರಿ ಸಚಿವರು ಸೂಚನೆ ನೀಡಿದರು. ಜಿಲ್ಲೆಯಲ್ಲಿ ಗಸ್ತು ಕಾರ್ಯಾಚರಣೆಗೆ ಪೊಲೀಸ್ ಇಲಾಖೆಗೆ ವಾಹನ ಹಾಗೂ ಮಾಧ್ಯಮ ಸಮನ್ವಯಕ್ಕಾಗಿ ವಾರ್ತಾ ಇಲಾಖೆಗೆ ಜಿಲ್ಲಾ ಖನಿಜ ಪ್ರತಿಷ್ಠಾನ ನಿಧಿಯ ಆಡಳಿತಾತ್ಮಕ ಅನುದಾನದಡಿ ವಾಹನ ಒದಗಿಸಲು ಸಭೆಯಲ್ಲಿ ಅನುಮೋದನೆ ನೀಡಲಾಯಿತು. ಸಭೆಯಲ್ಲಿ ಮೊಳಕಾಲ್ಮೂರು ಶಾಸಕ ಎನ್.ವೈ. ಗೋಪಾಲಕೃಷ್ಣ, ಚಳ್ಳಕೆರೆ ಶಾಸಕ ರಘುಮೂರ್ತಿ, ಹೊಸದುರ್ಗ ಶಾಸಕ ಬಿ.ಜಿ. ಗೋವಿಂದಪ್ಪ, ಹೊಳಲ್ಕೆರೆ ಶಾಸಕ ಎಂ. ಚಂದ್ರಪ್ಪ, ವಿಧಾನಪರಿಷತ್ ಸದಸ್ಯ ಕೆ.ಎಸ್. ನವೀನ್, ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ., ಜಿ.ಪಂ. ಸಿಇಒ ಸೋಮಶೇಖರ್ ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

### ರಾಜ್ಯಮಟ್ಟಕ್ಕೆ ಆಯ್ಕೆಯಾದ ಚಳ್ಳಕೆರೆ ಸರ್ಕಾರಿ ಪದವಿಪೂರ್ವ ಕಾಲೇಜು ವಿದ್ಯಾರ್ಥಿಗಳು



» ಚಳ್ಳಕೆರೆ

ಜಿಲ್ಲಾ ಮಟ್ಟದ ಪದವಿಪೂರ್ವ ಕಾಲೇಜುಗಳ ಕ್ರೀಡಾಕೂಟ ಚಿತ್ರದುರ್ಗದ ಒನಕೆ ಒಬವ್ವ ಕ್ರೀಡಾಂಗಣದಲ್ಲಿ ನೀಲಕಂಠಯ್ಯ ಮೆಮೋರಿಯಲ್ ಪದವಿ ಪೂರ್ವ ಕಾಲೇಜು ಮತ್ತು ಜಿಲ್ಲಾ ಮಟ್ಟದ ಪದವಿ ಪೂರ್ವ ಕಾಲೇಜುಗಳ ಆಶ್ರಯದಲ್ಲಿ ನಡೆದಿದ್ದು, ಚಳ್ಳಕೆರೆಯ ಸರ್ಕಾರಿ ಪದವಿ ಪೂರ್ವ ಕಾಲೇಜು ವಿದ್ಯಾರ್ಥಿಗಳು ವಿವಿಧ ಕ್ರೀಡೆಯಲ್ಲಿ ಜಿಲ್ಲಾ ಮಟ್ಟದಿಂದ ರಾಜ್ಯಮಟ್ಟಕ್ಕೆ ಆಯ್ಕೆಯಾಗಿರುವುದಾಗಿ ಕಾಲೇಜು ಪ್ರಾಂಶುಪಾಲ ಎಂ.ರವೀಶ್ ತಿಳಿಸಿದರು. ಅವರು, ಜಿಲ್ಲಾ ಮಟ್ಟದಿಂದ ರಾಜ್ಯಮಟ್ಟಕ್ಕೆ ಆಯ್ಕೆಯಾದ ಕ್ರೀಡಾಪಟುಗಳನ್ನು ಕಾಲೇಜಿನ ಆವರಣದಲ್ಲಿ ಹಮ್ಮಿಕೊಂಡಿದ್ದ ಅಭಿನಂದನಾ ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಪ್ರಸ್ತುತ ನಮ್ಮ ಕಾಲೇಜಿನಲ್ಲಿ 800ಕ್ಕೂ ಹೆಚ್ಚು ವಿದ್ಯಾರ್ಥಿಗಳಿದ್ದು, ಈ ಪೈಕಿ ಕಲೆ, ವಿಜ್ಞಾನ ಮತ್ತು ವಾಣಿಜ್ಯ ವಿಭಾಗದಿಂದ ಸುಮಾರು 200ಕ್ಕೂ ಹೆಚ್ಚು ಕ್ರೀಡಾಪಟುಗಳು ವಿವಿಧ ಕ್ರೀಡೆಯಲ್ಲಿ ಭಾಗವಹಿಸಿದ್ದರು. ಕ್ರೀಡಾಪಟುಗಳು ರಾಜ್ಯಮಟ್ಟದಲ್ಲೂ ಗೆಲುವು ಸಾಧಿಸಿ ಕಾಲೇಜು ಮತ್ತು ಜಿಲ್ಲೆಗೆ ಕೀರ್ತಿತರಲಿ ಎಂದು ಶುಭಹಾರೈಸಿದರು. ಮುಖ್ಯ ಅತಿಥಿಯಾಗಿ ಪಾಲ್ಗೊಂಡು ಮಾತನಾಡಿದ ಜಿಲ್ಲಾ ಉಪನ್ಯಾಸಕರ ಸಂಘದ ಮಾಜಿ ಅಧ್ಯಕ್ಷ ಎಸ್.ಲಕ್ಷ್ಮಣ್, ಇತ್ತೀಚಿನ ದಿನಗಳಲ್ಲಿ ಕ್ರೀಡೆಗಳಲ್ಲಿ ಗೆಲುವು ಸಾಧಿಸುವ ಎಲ್ಲಾ ಸ್ಪರ್ಧಿಗಳಿಗೆ ನಿರೀಕ್ಷೆಗೂ ಮೀರಿ ಸ್ಪಂದನೆ ವ್ಯಕ್ತವಾಗುತ್ತಿದೆ. ಕ್ರೀಡೆಗಳೂ ಸಹ ವಿದ್ಯಾರ್ಥಿಗಳಿಗೆ ಹೊಸ ಬದುಕು ರೂಪಿಸುವ ಸಾಮರ್ಥ್ಯ ಹೊಂದಿವೆ. ಕ್ರೀಡಾಪಟುಗಳ ಗೆಲುವಿಗೆ ಕಾಲೇಜಿನ ಕ್ರೀಡಾವಿಭಾಗದ ಕಾರ್ಯದರ್ಶಿ ಎಚ್.ಆರ್.ಜಬೀವುಲ್ಲಾ ಮತ್ತು ಎಲ್ಲಾ ಉಪನ್ಯಾಸಕರ ಸಹಕಾರಕ್ಕೆ ಅಭಿನಂದನೆ ಸಲ್ಲಿಸುವುದಾಗಿ ತಿಳಿಸಿದರು. ಕ್ರೀಡಾಪಟುಗಳು ಗೆಲುವು ಸಾಧಿಸುವ ಮೂಲಕ ಭವಿಷ್ಯದ ದಿನಗಳಲ್ಲಿ ರಾಜ್ಯ ಮತ್ತು ರಾಷ್ಟ್ರವನ್ನು ಪ್ರತಿನಿಧಿಸುವ ಶಕ್ತಿ ಸಾಮರ್ಥ್ಯ ಮತ್ತು ಅವಕಾಶ ಅವರಿಗೆ ಸಿಗಲಿ ಎಂದು ದೇವರಲ್ಲಿ ಪ್ರಾರ್ಥಿಸುವೆ ಎಂದರು. ಕ್ರೀಡಾ ಕಾರ್ಯದರ್ಶಿ ಹೆಚ್.ಆರ್. ಜಬೀವುಲ್ಲಾ ಮಾಹಿತಿ ನೀಡಿ, ಬಾಲಕಿಯರ ವಾಲಿಬಾಲ್ ತಂಡದಲ್ಲಿ ನಾಯಕಿಯಾಗಿ ತನುಶ್ರೀ, ಇತರೆ ಆಟಗಾರರಾಗಿ ಯಶಸ್ವಿನಿ, ಸಂಜನ, ಕೀರ್ತನಾ, ಕೌಸರ್, ಅಕ್ಷತಾ, ಚಂದನ, ಮಾನಸ, ಐಶ್ವರ್ಯ. ಕಬಡ್ಡಿ ವಿಭಾಗದಲ್ಲಿ ಗಿರಿಜಮ್ಮ ನಾಯಕಿಯಾಗಿ ಸುಷ್ಮಿತ, ಸ್ವಪ್ನ ಅರ್ಚನಾ, ಕಾವ್ಯ, ಮೇಘನಾ, ಪಲ್ಲವಿ ಉತ್ತಮ ಆಟದ ಮೂಲಕ ಜಿಲ್ಲಾ ಮಟ್ಟದಲ್ಲಿ ಗೆಲುವು ಸಾಧಿಸಿ ರಾಜ್ಯಮಟ್ಟಕ್ಕೆ ಆಯ್ಕೆಯಾಗಿರುತ್ತಾರೆ. ಬಾಲಕರ ಬಾಸ್ಕೇಟ್ ವಿಭಾಗದಲ್ಲಿ ಅರುಣ್ ತಂಡನಾಯಕನಾಗಿ ಮಂಜುನಾಥ, ಅಭಿಯಾದವ್, ನವಾಜ್, ರಾಕೇಶ್ ಉತ್ತಮ ಪ್ರದರ್ಶನ ನೀಡಿ ಜಿಲ್ಲಾ ಮಟ್ಟದಿಂದ ರಾಜ್ಯಮಟ್ಟಕ್ಕೆ ಆಯ್ಕೆಯಾದರು. ಕ್ರೀಡಾ ಕಾರ್ಯದರ್ಶಿ ಇಮ್ರಾನ್, ನಾಗರಾಜ್ ಬೆಳಗಟ್ಟ, ಡಾ. ತಿಮ್ಮಣ್ಣ ಅಭಿನಂದಿಸಿದ್ದಾರೆ.

### ವಿಶೇಷ ಚೇತನ ದಂಪತಿಗಳನ್ನು ಬರಮಾಡಿಕೊಂಡ ಎನ್. ದೇವರಹಳ್ಳಿ ಗ್ರಾಮಸ್ಥರು

# ಸಾಮಾಜಿಕ ಬಹಿಷ್ಕಾರ ಪ್ರಕರಣ ಇತ್ಯರ್ಥ

» ಚಿತ್ರದುರ್ಗ

ಚಳ್ಳಕೆರೆ ತಾಲ್ಲೂಕು ಎನ್. ದೇವರಹಳ್ಳಿ ಗ್ರಾಮದಲ್ಲಿ ವಿಶೇಷ ಚೇತನ ದಂಪತಿಗಳಿಗೆ ಸಾಮಾಜಿಕ ಬಹಿಷ್ಕಾರ ಹಾಕಿದ್ದಾರೆ ಎನ್ನಲಾದ ಪ್ರಕರಣವನ್ನು ದಂಪತಿಗಳಿಗೆ ಗ್ರಾಮದಲ್ಲಿ ಗ್ರಾಮಸ್ಥರು ಬರಮಾಡಿಕೊಳ್ಳುವ ಮೂಲಕ ಶಾಂತಿಯುತವಾಗಿ ಇತ್ಯರ್ಥಪಡಿಸಲಾಗಿದೆ ಎಂದು ಜಿಲ್ಲಾಧಿಕಾರಿ ದಿವ್ಯಪ್ರಭು ಅವರು ತಿಳಿಸಿದ್ದಾರೆ.

ಸಾಮಾಜಿಕ ಬಹಿಷ್ಕಾರದಂತಹ ಪ್ರಕರಣಗಳು ನಮ್ಮ ಸಮಾಜದಲ್ಲಿ ಮನೆಮಾಡಿರುವ ಸಾಮಾಜಿಕ ಪಿಡುಗಾಗಿದ್ದು, ಮುಂದುವರೆದಂತಹ ಈ ತಂತ್ರಜ್ಞಾನದ ಯುಗದಲ್ಲಿಯೂ ಇಂತಹ ಅನಿಷ್ಟ ಕಟ್ಟುಪಾಡಿನ ಆಚರಣೆಗಳು ನಾಗರಿಕರನ್ನು ತಲೆತಗ್ಗಿಸುವಂತೆ ಮಾಡುತ್ತದೆ. ವಿಶೇಷ ಚೇತನ ದಂಪತಿಗಳಿಗೆ ಗ್ರಾಮದಲ್ಲಿ ಸಾಮಾಜಿಕ ಬಹಿಷ್ಕಾರ ಹಾಕಿದ್ದಾರೆ ಎಂಬುದಾಗಿ ಮಾಧ್ಯಮಗಳಲ್ಲಿ ವರದಿಯಾದ ಬಳಿಕ, ಜಿಲ್ಲಾಡಳಿತ ಪ್ರಕರಣವನ್ನು ಗಂಭೀರವಾಗಿ ತೆಗೆದುಕೊಂಡು,ಅಧಿಕಾರಿಗಳಿಂದಮಾಹಿತಿ ಪಡೆಯಲಾಯಿತು. ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸೋಮಶೇಖರ್ ಅವರು ಶುಕ್ರವಾರದಂದು ಪೊಲೀಸ್, ಶಿಕ್ಷಣ ಸೇರಿದಂತೆ ವಿವಿಧ ಅಧಿಕಾರಿಗಳೊಂದಿಗೆ ಗ್ರಾಮಕ್ಕೆ ಭೇಟಿ ನೀಡಿ, ಅಲ್ಲಿನ ಗ್ರಾಮ ಪಂಚಾಯತ್ ಸದಸ್ಯರು, ಸಮಾಜದ ಮುಖಂಡರೊಂದಿಗೆ ಹಾಗೂ ಸಾರ್ವಜನಿಕರೊಂದಿಗೆ ಸಭೆ ಕೈಗೊಂಡು, ಚರ್ಚಿಸಿ, ಯಾವುದೇ ಕಾರಣಕ್ಕೂ ಇಂತಹ ಘಟನೆಗಳು ಜರುಗಬಾರದು, ಇಂತಹ ಪ್ರಕರಣವನ್ನು ಬೆಂಬಲಿಸಿದವರು ಕೂಡ ಶಿಕ್ಷೆಗೆ ಗುರಿಯಾಗಬೇಕಾಗುತ್ತದೆ ಎಂಬ ಎಚ್ಚರಿಕೆಯನ್ನು ನೀಡಿದ್ದರು ಎಂದರು.



ಶನಿವಾರದಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ಭಾರತಿ ಬಣಕಾರ್, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಅಧಿಕಾರಿ ಸುಬ್ರ ನಾಯಕ್, ತಹಸಿಲ್ದಾರ್ ರೆಹಾನ್ ಪಾಶಾ, ಪೊಲೀಸ್ ಅಧಿಕಾರಿಗಳು ಸೇರಿದಂತೆ ವಿವಿಧ ಅಧಿಕಾರಿಗಳು ಗ್ರಾಮಕ್ಕೆ ಭೇಟಿ ನೀಡಿ, ಇಲ್ಲಿ ಸಾರ್ವಜನಿಕರು ಹಾಗೂ ಮುಖಂಡರೊಂದಿಗೆ ಶಾಂತಿ ಸಭೆ ನಡೆಸಿ, ಬಳಿಕ ಇಂತಹ ಪ್ರಕರಣಗಳು ಮರುಕಳಿಸದಂತೆ ಗ್ರಾಮಸ್ಥರಿಗೆ ಎಚ್ಚರಿಕೆಯನ್ನು ನೀಡಿದ್ದಾರೆ. ಯಾವುದೇ ಸಮಾಜ ಅಥವಾ ವ್ಯಕ್ತಿಗಳಿಗೆ ದಂಡ ಹಾಕುವ ಅಧಿಕಾರ ಯಾರಿಗೂ ಇಲ್ಲ, ಇಂತಹ ಅಧಿಕಾರ ಕೇವಲ ನ್ಯಾಯಾಲಯಕ್ಕೆ ಮಾತ್ರ ಇದೆ. ಬಹಿಷ್ಕಾರ ಹಾಕುವಂತಹದು ಕಾನೂನಿಗೆ ವಿರುದ್ಧವಾಗಿದ್ದು, ಇದಕ್ಕೆ ಅವಕಾಶ ನೀಡುವವರು,ಬೆಂಬಲಿಸುವವರು ಎಲ್ಲರೂ ಕಠಿಣ ಕ್ರಮಕ್ಕೆ ಗುರಿಯಾಗಬೇಕಾಗುತ್ತದೆ ಎಂಬ ಎಚ್ಚರಿಕೆಯನ್ನು ಇದೇ ಸಂದರ್ಭದಲ್ಲಿ ನೀಡಲಾಯಿತು. ಗ್ರಾಮದಲ್ಲಿ ಎಲ್ಲ ಜಾತಿ, ಜನಾಂಗದವರು ಇದ್ದಾರೆ, ಎಲ್ಲರೂ ಸೌಹಾರ್ದಯುತವಾಗಿ ಬಾಳುವುದು ನಮ್ಮ ಆದ್ಯತೆಯಾಗಬೇಕು. ಮೂಢನಂಬಿಕೆಗಳನ್ನು ತೊಡೆದುಹಾಕಿ, ಅನಿಷ್ಟ ಕಟ್ಟುಪಾಡುಗಳನ್ನು ನಿರ್ಮೂಲನೆ ಮಾಡಬೇಕು ಎಂದು ಅಧಿಕಾರಿಗಳು ಗ್ರಾಮಸ್ಥರಿಗೆ ಮನವರಿಕೆ ಮಾಡಿಕೊಟ್ಟರು.

ವಿಶೇಷ ಚೇತನ ದಂಪತಿಗಳನ್ನು ಅಧಿಕಾರಿಗಳು ಶನಿವಾರದಂದು ಗ್ರಾಮಕ್ಕೆ ಕರೆತಂದ ಬಳಿಕ, ಗ್ರಾಮಸ್ಥರು ಕೂಡ ದಂಪತಿಗಳನ್ನು ಬರಮಾಡಿಕೊಂಡರು, ಒಟ್ಟಾರೆಯಾಗಿ ಈ ಪ್ರಕರಣವನ್ನು ದಂಪತಿಗಳು ಗ್ರಾಮದಲ್ಲಿನ ತಮ್ಮ ಮನೆ ಸೇರುವ ಮೂಲಕ ಜಿಲ್ಲಾಡಳಿತದ ವತಿಯಿಂದ ಶಾಂತಿಯುತವಾಗಿ ಇತ್ಯರ್ಥಪಡಿಸಲಾಗಿದ್ದು, ಮುಂದಿನ ದಿನಗಳಲ್ಲಿ ಜಿಲ್ಲೆಯಲ್ಲಿ ಇಂತಹ ಪ್ರಕರಣಗಳು ಮರುಕಳಿಸದಂತೆ ವಿವಿಧ ಇಲಾಖೆಗಳ ಸಹಯೋಗದಲ್ಲಿ ಸಾಮಾಜಿಕ ಅರಿವು ಮೂಡಿಸುವ ಕಾರ್ಯಕ್ರಮ ಹಮ್ಮಿಕೊಳ್ಳಲಾಗುವುದು. ಎನ್. ದೇವರಹಳ್ಳಿ ಗ್ರಾಮದಲ್ಲಿಯೂ ಕೂಡ ಜನಜಾಗೃತಿ ಮೂಡಿಸುವ ಕಾರ್ಯಕ್ರಮ ಆಯೋಜಿಸಲಾಗುವುದು ಎಂದು ಜಿಲ್ಲಾಧಿಕಾರಿ ದಿವ್ಯಪ್ರಭು ಅವರು ತಿಳಿಸಿದ್ದಾರೆ.

## ನಿಮ್ಮ ಬೇಡಿಕೆಗಳ ಪಟ್ಟಿ ಸಲ್ಲಿಸಿ: ಚಂದ್ರಪ್ಪ




» ಮೊದಲ ಪುಟದಿಂದ

ಪುಟ್ಟರಾಜು, ಟಿ.ಬಿ.ಜಯಚಂದ್ರರವರು ಅನುಷ್ಠಾನಗೊಳಿಸಿರುವುದನ್ನು ಬಿಟ್ಟರೆ ನಂತರ ಒಂದು ಪುಡಿಗಾಸು ಬಿಡುಗಡೆಯಾಗಿಲ್ಲ.

2018 ರಿಂದ 23 ರವರೆಗೆ ರಾಜ್ಯದಲ್ಲಿ ಅಧಿಕಾರ ನಡೆಸಿದ ಬಿಜೆಪಿ. ಸರ್ಕಾರ ಹೆಗಲ ಮೇಲೆ ಹಸಿರು ಟವಲ್ ಹಾಕಿಕೊಂಡು ರೈತ ಪರವಾಗಿದ್ದೇವೆಂದು ಘೋಸ್ ನೀಡಿತೆ ವಿನಃ ರೈತರಿಗೆ ಅನುಕೂಲವಾಗುವ ಯಾವ ಯೋಜನೆಗಳನ್ನು ಜಾರಿಗೆ ತರಲಿಲ್ಲ. ಈಗ ರಾಜ್ಯದಲ್ಲಿ ಕಾಂಗ್ರೆಸ್ 136 ಸೀಟುಗಳನ್ನು ಗೆದ್ದು ಸ್ಪಷ್ಟ ಬಹುಮತದೊಂದಿಗೆ ಅಧಿಕಾರ ನಡೆಸುತ್ತಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯನವರು ಇದುವರೆವಿಗೂ ಹದಿನಾಲ್ಕು ಆಯವ್ಯಯಗಳನ್ನು ಮಂಡಿಸಿದ್ದಾರೆ. ವಿಧಾನಸಭಾ ಚುನಾವಣಾ ಪೂರ್ವದಲ್ಲಿಯೇ ಐದು ಉಚಿತ ಗ್ಯಾರೆಂಟಿಗಳನ್ನು ಘೋಷಿಸಿದ್ದರು.

ಅದರಂತೆ ಅಧಿಕಾರಕ್ಕೆ ಬಂದ ತಕ್ಷಣ ನಾಲ್ಕು ಗ್ಯಾರೆಂಟಿಗಳನ್ನು ಈಡೇರಿಸಿದ್ದಾರೆ. ಗ್ಯಾರೆಂಟಿಗಳಿಗೆ ಹೆಚ್ಚು ಹಣ ಕೊಟ್ಟು ಸರ್ಕಾರ ನಡೆಸುವುದು ಕಷ್ಟ. ಆದರೂ ರೈತ ಪರ ಕಾರ್ಯಕ್ರಮಗಳು ಮಾತ್ರ ನಿಲ್ಲುವುದಿಲ್ಲ. ನಿಮ್ಮ ಪರವಾಗಿ ನಾನಿದ್ದೇನೆಂದು ಹೇಳಿದರು.

ನಿಮ್ಮ ನ್ಯೂನ್ಯತೆ, ಬೇಡಿಕೆಗಳು ಏನೇನಿದೆ ಎನ್ನುವುದನ್ನು ಪಟ್ಟಿ ಮಾಡಿಕೊಂಡು ಮನವಿ ಕೊಡಿ. ಎಲ್ಲರೂ ಸೇರಿ ನೀರಾವರಿ ಸಚಿವರನ್ನು ಭೇಟಿಯಾಗಿ ಸರಿಪಡಿಸುವ ಕೆಲಸ ಮಾಡೋಣ. ಜಿಲ್ಲೆಯ ಜನರ ಋಣ ನನ್ನ ಮೇಲಿದೆ.

ನಿಮ್ಮ ನಂಬಿಕೆಗೆ ಧಕ್ಕೆ ಬಾರದಂತೆ ಕೆಲಸ ಮಾಡುತ್ತೇನೆಂಬ ವಿಶ್ವಾಸ ವ್ಯಕ್ತಪಡಿಸಿದರು. ಜಿಲ್ಲಾ ಕೆರೆ ಬಳಕೆದಾರರ ಸಂಘಗಳ ಒಕ್ಕೂಟದ ಅಧ್ಯಕ್ಷ ಬಿ.ನಾಗರಾಜಯ್ಯ, ಉಪಾಧ್ಯಕ್ಷ ಬಿ.ಎಸ್.ಐಯ್ಯಣ್ಣ, ಕಾರ್ಯದರ್ಶಿ ಆನಂದ ಓ. ಸಹ ಕಾರ್ಯದರ್ಶಿ ಜಗದೀಶ್ ನಾಡಿಗ್, ಖಜಾಂಚಿ ಜಿ.ಭೋಜರಾಜ, ನಿರ್ದೇಶಕರುಗಳಾದ ಸಿ.ಆರ್.ನಾಗರಾಜ, ಪಿ.ಎಂ.ಸಿದ್ದಪ್ಪ, ಜಿ.ಕೆ.ಕುಮಾರ್, ಜಿ.ಎಂ.ನಾಗೇಂದ್ರಪ್ಪ, ಬಿ.ಎಲ್.ನಾಗರಾಜ, ಟಿ.ರೂಪ, ಆರ್.ಮಲ್ಲೇಶಪ್ಪ, ಡಿ.ಬಿ.ಸಿದ್ದಪ್ಪ, ಆರ್.ಎನ್.ಚಂದ್ರಪ್ಪ, ಜಿ.ಕೆ.ರಂಗನಾಥ್, ಎನ್.ಶಿವಕುಮಾರ್, ಟಿ.ರಾಮಚಂದ್ರಪ್ಪ, ಆರ್.ಕೃಷ್ಣಪ್ಪ, ಹೆಚ್.ಟಿ.ಚಂದ್ರಶೇಖರಯ್ಯ, ಕೆ.ಟಿ.ಜಯನಾಯ್ಕ ವೇದಿಕೆಯಲ್ಲಿದ್ದರು.



ಮೈಸೂರಿನಲ್ಲಿ ಕಲೆಮನೆ ಸಭಾಂಗಣದಲ್ಲಿ ಕುಮಾರ್ ಪರ್ಫಾರ್ಮಿಂಗ್ ಆರ್ಟ್ ಸಂಸ್ಥೆಯಿಂದ ಚಿತ್ರದುರ್ಗದ ಶ್ರೀ ಅಂಜನ ನೃತ್ಯ ಕಲಾ ಕೇಂದ್ರದ ನೃತ್ಯ ದಂಪತಿಗಳಾದ ಶಿವಪ್ರಕಾಶ್ ಹಾಗೂ ಡಾ.ನಂದಿನಿ ಶಿವಪ್ರಕಾಶ್‌ಅವರಿಗೆ ಕಲಾಶ್ರೀ ಪ್ರಶಸ್ತಿ ಪ್ರಧಾನ ಮಾಡಿದರು.

## ಮೇರಿ ಮಾಟಿ ಮೇರ ದೇಶ್ ಅಭಿಯಾನಕ್ಕೆ ಚಾಲನೆ




» ಮೊದಲ ಪುಟದಿಂದ

ಚಾಲನೆ ಕಾರ್ಯಕ್ರಮದಲ್ಲಿ ತಹಶೀಲ್ದಾರ್ ಹಾಗೂ ತಾಲ್ಲೂಕು ದಂಡಾಧಿಕಾರಿಗಳಾದ ಬಿ.ಬಿ.ಫಾತಿಮಾ, ಪುರಸಭೆ ಸದಸ್ಯರಾದ ಹೆಚ್.ಆರ್.ನಾಗರತ್ನ ವೇದಮೂರ್ತಿ, ಪಿ.ಎಸ್.ಮಲ್ಲಿಕಾರ್ಜುನ, ಡಿ.ಎಸ್.ವಿಜಯ, ಬಿ.ಎಸ್.ರುದ್ರಪ್ಪ, ವಿಜಯ ಸಿಂಹ ಖಾಟ್ರೋತ್, ಮಮತ ಜಯಸಿಂಹ ಖಾಟ್ರೋತ್, ಪಿ.ಹೆಚ್.ಮುರುಗೇಶ್, ಆರ್.ಎ.ಅಶೋಕ್. ಕೆ.ಸಿ.ರಮೇಶ್, ಶಭೀನ ಅಶ್ರಫ್, ಸೈಯದ್ ಸಜೀಲ್, ಸೈಯದ್ ಮನ್ಸೂರ್, ಪೂರ್ಣಿಮಾ ಬಸವರಾಜ್, ಸುಧಾ ಬಸವರಾಜ್, ಸವಿತಾ ನರಸಿಂಹ ಖಾಟ್ರೋತ್, ವಸಂತ ರಾಜಪ್ಪ, ಆರೋಗ್ಯ ನಿರೀಕ್ಷಕರಾದ ಶೌಕತ್, ಪ್ರಶಾಂತ್, ದಫೇದಾರ್ ಶಿವಕುಮಾರ್ ಹಾಗೂ ಪೌರಕಾರ್ಮಿಕರು ಪಾಲ್ಗೊಂಡಿದ್ದರು.

## ಪ್ರಮುಖ ಸುದ್ದಿ

### ಎಚ್‌ಪಿಸಿಸಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಸ್ವಚ್ಛತಾ ಹೀ ಅಭಿಯಾನಯದಲ್ಲಿ

# ಎಲ್ಲರ ಸಕಾರದಿಂದ ಮಾತ್ರ ಸ್ವಚ್ಛತೆಯ ಪರಿಕಲ್ಪನೆ ಯಶಸ್ಸು

» ಚಳ್ಳಕೆರೆ

ಸ್ವಚ್ಛತೆ ಆಂದೋಲನ ಇಂದು ಪ್ರತಿಯೊಂದು ಮನೆ ಮತ್ತು ಮನಗಳಲ್ಲಿ ವಿಶೇಷ ಸ್ಥಾನಮಾನ ಪಡೆಯಬೇಕಿದೆ. ಸ್ವಚ್ಛತೆಯ ಬಗ್ಗೆ ಸರ್ವರಲ್ಲೂ ಜಾಗೃತಿ ಮೂಡಿಸುವುದಲ್ಲದೆ, ಸರ್ವರೂ ಈ ಕಾರ್ಯಕ್ರಮದಲ್ಲಿಭಾಗಿಯಾಗುವಮೂಲಕ ಸ್ವಚ್ಛತೆಯ ಪರಿಕಲ್ಪನೆಯ ಯೋಜನೆಯನ್ನು ಸಕಾರಗೊಳಿಸುವಲ್ಲಿ ಕೈಜೋಡಿಸಬೇಕೆಂದು ಶಾಸಕ ಟಿ.ರಘುಮೂರ್ತಿ ತಿಳಿಸಿದರು.

ಅವರು, ನಗರದ ಎಚ್‌ಪಿಪಿಸಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಆವರಣದಲ್ಲಿ ಸ್ವಚ್ಛತಾ ಹೀ ಸೇವಾ ಅಭಿಯಾನವನ್ನು ಸ್ವಚ್ಛತಾ ಕಾರ್ಯ ನಡೆಸುವ ಮೂಲಕ ಚಾಲನೆ ನೀಡಿ ಮಾತನಾಡಿದರು. ಸ್ವಚ್ಛತೆ ಎಂಬುವುದು ಒಂದು ಉತ್ತಮ ಪರಿಕಲ್ಪನೆ, ಇದರ ಹಿಂದೆ ಸಾಕಷ್ಟು ಸಕರಾತ್ಮಕ ಪ್ರಕ್ರಿಯೆಗಳು ಅಡಗಿವೆ. ಸ್ವಚ್ಛತೆಯಿಂದ ಮಾತ್ರ ನಾವು ಸಾಧನೆಯತ್ತ ಹೆಜ್ಜೆ ಇಡಲು ಸಾಧ್ಯವಾಗುತ್ತದೆ. ಎಲ್ಲಿ ಸ್ವಚ್ಛತೆ ಇರುತ್ತದೆಯೋ ಅಲ್ಲಿ ಪ್ರಾಮಾಣಿಕತೆ ಇರುತ್ತದೆ. ಕಾಲೇಜಿನ ಪ್ರಾಂಶುಪಾಲರೂ ಸೇರಿದಂತೆ ಎಲ್ಲರೂ ಸ್ವಚ್ಛತಾ ಅಭಿಯಾನ ಯಶಸ್ವಿಗೊಳಿಸುವ ನಿಟ್ಟಿನಲ್ಲಿ ಪ್ರಾಮಾಣಿಕವಾಗಿಕಾರ್ಯನಿರ್ವಹಿಸಬೇಕು ಎಂದರು.



ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಪ್ರಾಂಶುಪಾಲ ಡಾ.ಆರ್.ರಂಗಪ್ಪ ಮಾತನಾಡಿ, ಕಾಲೇಜಿನ ಐಕ್ಯೂಎಸಿ, ರಾಷ್ಟ್ರೀಯ ಸೇವಾ ಯೋಜನಾ ಘಟಕ 1, 2, ಎನ್‌ಸಿಸಿ, ಯೂತ್‌ರೆಡ್‌ಕ್ರಾಸ್, ರೋವರ್ಸ್, ರೇಂಜರ್ಸ್ ಮತ್ತು ಕ್ರೀಡಾ ವಿಭಾಗ ಸಹಯೋಗದೊಂದಿಗೆ ಈ ಕಾರ್ಯಕ್ರಮ ಹಮ್ಮಿಕೊಂಡಿದೆ. ನಗರಸಭಾ ಆಡಳಿತ ಸಹ ಈ ಕಾರ್ಯಕ್ರಮಕ್ಕೆ ಸಹಕಾರ ನೀಡಿದೆ, ಕಾಲೇಜಿನ ಎಲ್ಲಾ ಪ್ರಾಧ್ಯಾಪಕರು, ಉಪನ್ಯಾಸಕರು, ಆಡಳಿತ ಮಂಡಳಿ ಹಾಗೂ ವಿದ್ಯಾರ್ಥಿಗಳು ಸಹ ಸ್ವಚ್ಛತಾ ಕಾರ್ಯಕ್ಕೆ ಮೊದಲ ಆದ್ಯತೆ ನೀಡಬೇಕು. ಈ ವಿಶೇಷ ಅಭಿಯಾನದಡಿ ಪ್ರತಿಯೊಬ್ಬ ವ್ಯಕ್ತಿಯೂ ಗಿಡ ನೆಟ್ಟು ಪೋಷಣೆ ಮಾಡುವ ಮೂಲಕ ಪರಿಸರ ಜಾಗೃತಿಯ ಕನಸನ್ನು ನನಸು ಮಾಡಲು ಮುಂದಾಗಬೇಕೆಂದರು.

ಪ್ರಾಧ್ಯಾಪಕರಾದ ಪ್ರೊ.ಎಚ್. ತಿಪ್ಪೇಸ್ವಾಮಿ, ಹನುಮಂತರಾಯ, ಜಗನ್ನಾಥ, ರಘುನಾಥ, ವಿಜಯಕುಮಾರ್, ಜಿ.ವಿ.ರಾಜಣ್ಣ, ಕೃಷ್ಣೇಗೌಡ, ಕೆ.ಚಿತ್ತಯ್ಯ, ಜಮುನಾರಾಣಿ, ಡಾ.ಪಾಪಣ್ಣ, ವಿಷ್ಣು, ವಿನೇಶ್, ಕನ್ನಡಸಾಹಿತ್ಯ ಪರಿಷತ್ ಅಧ್ಯಕ್ಷ ಜಿ.ಟಿ.ವೀರಭದ್ರಸ್ವಾಮಿ, ಮುಖಂಡರಾದ ರುದ್ರಮುನಿ, ಜಿ.ವಿ.ಶ್ರೀನಿವಾಸ್‌ಮೂರ್ತಿ, ಜೆ.ಟಿ.ಶಶಿಧರ ಮುಂತಾದವರು ಉಪಸ್ಥಿತರಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T